# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –236 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:11–04–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 236 | RNI No: KARKAN/2023/88462 | KA/SK/CTA-874/2024-2026 | Chitradurga | Date: 11-04-2025 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮನುಕುಲಕ್ಕೆ ಅಹಿಂಸಾ ತತ್ವ ಪಾಲನೆ ಅವಶ್ಯ: ಬಿ.ಟಿ.ಕುಮಾರಸ್ವಾಮಿ 2

ನಂದಿನಿ ಇಡ್ಲಿ–ದೋಸೆ ಹಿಟ್ಟಿಗೆ ಭಾರೀ ಬೇಡಿಕೆ: ಪೂರೈಸಲು ಕೆಎಂಎಫ್ ವಿಫಲ 3

ವಿವಿಧ ರೈಲ್ವೆ ಕಾಮಗಾರಿಗಳಿಗೆ ಕೇಂದ್ರ ಸಚಿವ ಸೋಮಣ್ಣ ಶಂಕು ಸ್ಥಾಪನೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಲಾರಿಗೆ ಬೈಕ್ ಡಿಕ್ಕಿ ಬೈಕ್ ಸವಾರ ಸಾವು

» **ಹೊಸದುರ್ಗ**

ಮುಂದೆ ಹೋಗುತ್ತಿದ್ದ ಲಾರಿಯ ಚಾಲಕ ಒಮ್ಮೆಲೆ ಬ್ರೇಕ್ ಹಾಕಿದ ಪರಿಣಾಮ ಹಿಂಬದಿಯಿಂದ ಬರುತ್ತಿದ್ದ ಬೈಕ್ ಲಾರಿಗೆ ಡಿಕ್ಕಿ ಪಡಿಸಿದ ಪರಿಣಾಮ ಬೈಕ್ ಚಾಲಕ ಸಾವನ್ನಪ್ಪಿರುವ ಘಟನೆ ತಾಲೂಕಿನ ಮಧುರೆ ದಿಬ್ಬದ ಸಮೀಪ ಸಂಭವಿಸಿದೆ. ಮೃತನನ್ನ ತಾಲೂಕಿನ ಗುತ್ತಿಕಟ್ಟೆ ಲಂಬಾಣಿಹಟ್ಟಿ ಗ್ರಾಮದ ಮಂಜನಾಯ್ಕ ಎಂಬುವವರ ಪುತ್ರ ಶಶಿಕುಮಾರ್ (42) ಎಂದು ತಿಳಿದು ಬಂದಿದ್ದು ಶಶಿಕುಮಾರ್ ಹೊಸದುರ್ಗದಿಂದ ಮಧುರೆ ಕಡೆಗೆ ಹೋಗುತ್ತಿದ್ದ ಸಂಧರ್ಬದಲ್ಲಿ ಈ ಅವಘಡ ನಡೆದಿದ್ದು ಗಾಯಗೊಂಡಿದ್ದವನನ್ನ ಹೊಸದುರ್ಗ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಿದರೂ ಸಹಾ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾನೆ ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಸರ್ಕಾರದ ವಿರುದ್ದ ರಾಜ್ಯ ಗುತ್ತಿಗೆದಾರರ ಸಂಘ ಅಸಮಾಧಾನ

» **ಚಿತ್ರದುರ್ಗ**

ಸರ್ಕಾರದ ವಿರುದ್ಧ ಗುತ್ತಿಗೆದಾರರ ಸಂಘ ಈಗ ಸಿಡಿದೆದ್ದಿದೆ. ಹಣ ಬಿಡುಗಡೆಗೆ ಕಾಣದ ಕೈಗಳು, ಮಧ್ಯವರ್ತಿಗಳ ಕಾಟ ಹೆಚ್ಚಾಗಿದೆ ಎಂದು ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘ ಅಧ್ಯಕ್ಷ ಮಂಜುನಾಥ್ ಹೊಸ ಬಾಂಬ್ ಸಿಡಿಸಿದ್ದಾರೆ. ಚಿತ್ರದುರ್ಗದಲ್ಲಿ ಮಾಧ್ಯಮದವರ ಜೊತೆ ಮಾತನಾಡಿದ್ದು ಸಣ್ಣ ಮತ್ತು ಮಧ್ಯಮ ವರ್ಗದ ಗುತ್ತಿಗೆದಾರರಿಗೆ ಹಣ ಬಿಡುಗಡೆ ಮಧ್ಯವರ್ತಿಗಳ ಕಾಟ ಕೊಡುತ್ತಿದ್ದಾರೆ. ಜೇಷ್ಠತೆ ಪಾಲಿಸದೇ ಸ್ಪೆಷಲ್ ಎಲ್‌ಓಸಿ ಸೃಷ್ಟಿ ಮಾಡಿ ಹಣ ಬಿಡುಗಡೆ ಮಾಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದೆ. ಸಿಎಂ ಸಿದ್ದರಾಮಯ್ಯನವರಿಗೆ ಪತ್ರ ಬರೆದ ಸಂಘ ಲೋಕೋಪಯೋಗಿ ಇಲಾಖೆ, ನಾಲ್ಕು ನೀರಾವರಿ ನಿಗಮ ಮತ್ತು ಸಣ್ಣ ನೀರಾವರಿ ಇಲಾಖೆಯಲ್ಲಿ ಕಾಣದ ಕೈಗಳ ಬಗ್ಗೆ ಚರ್ಚೆ ಮಾಡಿ ಸಣ್ಣ ಗುತ್ತಿಗೆದಾರರಿಗೆ ನ್ಯಾಯ ಒದಗಿಸುವಂತೆ ಪತ್ರ ಬರೆದಿದೆ. ಜೇಷ್ಠತೆ ಆಧಾರದಲ್ಲಿ ಬಾಕಿ ಹಣ ಬಿಡುಗಡೆ ಮಾಡಲು ಆಗದಿದ್ದರೆ ವಿಶೇಷ ಗುತ್ತಿಗೆ ವ್ಯವಸ್ಥೆಯಡಿಯಲ್ಲೇ ಸಣ್ಣ ಹಾಗೂ ಮಧ್ಯಮ ಗುತ್ತಿಗೆದಾರರಿಗೆ ರೂ.5 ಲಕ್ಷದಿಂದ 50ಲಕ್ಷದವರೆಗೆ ಹಣ ಬಿಡುಗಡೆ ಮಾಡಬೇಕು. ಅದನ್ನು ಬಿಟ್ಟು ಸ್ಪೆಷಲ್ ಎಲ್‌ಓಸಿ ನೆಪದಲ್ಲಿ ಬಲಾಢ್ಯ ಗುತ್ತಿಗೆದಾರರಿಗೆ ಮಾತ್ರ ಹಣ ಬಿಡುಗಡೆ ಮಾಡುವ ಪರಿಪಾಠ ನಿಲ್ಲಿಸಬೇಕು ಎಂದು ಸಂಘದ ಅಧ್ಯಕ್ಷ ಆರ್. ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಜಿ.ಎಂ. ರವೀಂದ್ರ ಒತ್ತಾಯಿಸಿದ್ದಾರೆ. ಸಣ್ಣ ಹಾಗೂ ಮಧ್ಯಮ ವರ್ಗದ ಗುತ್ತಿಗೆದಾರರು ಸುಮಾರು ಮೂರು ವರ್ಷಗಳಿಂದ ಅನುಭವಿಸುತ್ತಿರುವ ಸಮಸ್ಯೆಗಳ ಬಗ್ಗೆ ಈಗಾಗಲೇ ಹಲವು ಬಾರಿ ಸರ್ಕಾರದ ಗಮನಕ್ಕೆ ತರಲಾಗಿದೆ. ಜೇಷ್ಠತೆ ಆಧಾರದ ಮೇಲೆ ಹಣ ಬಿಡುಗಡೆ ಮಾಡಲು ತೀರ್ಮಾನಿಸಿದ್ದರೂ ವಿಶೇಷ ಗುತ್ತಿಗೆ ವ್ಯವಸ್ಥೆ( ಸ್ಪೆಷಲ್ ಎಲ್‌ಓಸಿ) ಅಡಿಯಲ್ಲಿ ಬಲಾಢ್ಯರಿಗೆ ಮಾತ್ರ ಹಣ ಬಿಡುಗಡೆ ಮಾಡಲು ಮುಂದಾಗಿರುವುದು ಸರಿಯಲ್ಲ. ಸುಮಾರು 3–4 ತಿಂಗಳಿಂದ ಈ ಮೇಲಿನ ಎಲ್ಲಾ ಇಲಾಖೆಗಳಲ್ಲಿ ಮಧ್ಯವರ್ತಿಗಳು ಕಾಟದಿಂದ ಇಡೀ ವ್ಯವಸ್ಥೆಯೇ ಹದಗೆಟ್ಟಿದೆ ಎಂದು ಆರೋಪಿಸಿದ್ದಾರೆ. ಮೂರು ವರ್ಷಗಳಿಂದ ಗುತ್ತಿಗೆದಾರರು ಹಣ ಬಿಡುಗಡೆಯಾಗದೆ ಸಂಕಷ್ಟದಲ್ಲಿದ್ದಾರೆ. ಏಪ್ರಿಲ್ ತಿಂಗಳಲ್ಲಿ ಗುತ್ತಿಗೆದಾರರ ಬಾಕಿ ಹಣದ ಶೇ 50 ರಷ್ಟು ಪಾವತಿ ಮಾಡುವುದಾಗಿ ಕಳೆದ ತಿಂಗಳು ಭರವಸೆ ನೀಡಿ ದ್ದೀರಿ, ಹಾಗಾಗಿ ಕೂಡಲೇ 15 ಸಾವಿರ ಕೋಟಿ ಬಾಕಿ ಹಣ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

### ಚೆಕ್ ಬೌನ್ಸ್: ಶಾಸಕ ನಾಗೇಂದ್ರಗೆ ಜೈಲು

» **ಬೆಂಗಳೂರು**

ಚೆಕ್ ಬೌನ್ಸ್ ಪ್ರಕರಣವೊಂದರಲ್ಲಿ ಶಾಸಕ ಬಿ.ನಾಗೇಂದ್ರ ಅವರಿಗೆ ಜನಪ್ರತಿನಿಧಿಗಳ ಮ್ಯಾಜಿಸ್ಟ್ರೇಟ್ ನ್ಯಾಯಾಲಯ 1 ವರ್ಷ ಜೈಲು ಶಿಕ್ಷೆ ವಿಧಿಸಿದೆ. ಅಂತೆಯೇ 'ಪ್ರಕರಣದ ದೂರುದಾರರಿಗೆ 1 ಕೋಟಿ 24 ಲಕ್ಷ ಮೊತ್ತವನ್ನು ನಾಗೇಂದ್ರ ಪಾವತಿಸಬೇಕು' ಎಂದು ಆದೇಶಿಸಿದೆ. ಈ ಸಂಬಂಧ 'ಮೆಸರ್ಸ್ ವಿಎಸ್‌ಎಲ್ ಸ್ಟೀಲ್ ಲಿಮಿಟೆಡ್ ಕಂಪನಿ' ಪ್ರಧಾನ ವ್ಯವಸ್ಥಾಪಕ ರಾಘವೇಂದ್ರ ಘೋಡ್ಕೆ ಸಲ್ಲಿಸಿದ್ದ ದೂರಿನ ವಿಚಾರಣೆ ನಡೆಸಿ ಕಾಯ್ದಿರಿಸಿದ್ದ ಆದೇಶವನ್ನು 'ಶಾಸಕರು–ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯ ವಿಶೇಷ ಮ್ಯಾಜಿಸ್ಟ್ರೇಟ್ ನ್ಯಾಯಾಲಯ'ದ ನ್ಯಾಯಾಧೀಶ ಕೆ.ಎನ್.ಶಿವಕುಮಾರ್ ಬುಧವಾರ ಪ್ರಕಟಿಸಿದರು.

# ಇಂದು ಚಿತ್ರದುರ್ಗಕ್ಕೆ ಭೀಮ ರಥಯಾತ್ರೆ

» **ಚಿತ್ರದುರ್ಗ**



ಡಾ. ಬಿ ಆರ್ ಅಂಬೇಡ್ಕರ್‌ರವರು 1925ರ ಏಪ್ರಿಲ್ 10 ಮತ್ತು 11ರಂದು ದಲಿತರ ಉದ್ಧಾರಕ್ಕಾಗಿ ಹಮ್ಮಿ ಕೊಂಡಿದ್ದ ಬಹಿಷ್ಕೃತ ಹಿತ ಕಾರ್ಯಕಾರಿಣಿ ಸಭೆಯ ನೂರು ವರ್ಷದ ಸವಿ ನೆನಪಿಗಾಗಿ ಬಿಜೆಪಿವತಿಯಿಂದ ಭೀಮನ ಹೆಜ್ಜೆ ನೂರರ ಸಂಭ್ರಮ ಎಂಬ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು ಏ. 11 ರಿಂದ 15ರವರೆಗೆ ರಾಜ್ಯದಲ್ಲಿ ಸಂಚಾರ ಮಾಡಲಿದೆ ಎಂದು ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಡಾ. ಬಿ.ಆರ್. ಅಂಬೇಡ್ಕರ್‌ರವರು ದಲಿತರ ಸಾಮಾಜಿಕ ಆರ್ಥಿಕ ಹಾಗೂ ಶೈಕ್ಷಣಿಕ ಅಭಿವೃದ್ಧಿಗಾಗಿ ರಾಜ್ಯದ ನಿಪ್ಪಾಣಿಯಲ್ಲಿ 1925ರಲ್ಲಿ ಕಾರ್ಯಕ್ರಮವನ್ನು ಆಯೋಜಿಸಿದ್ದರು ಈ ಕಾರ್ಯಕ್ರಮದ ನಿಮಿತ್ತ ಕರ್ನಾಟಕದ 10 ಜಿಲ್ಲೆಗಳಲ್ಲಿ ಅಂಬೇಡ್ಕರ್ ರವರು ಸಂಚಾರ ನಡೆಸಿದರು ಇದರ ಸವಿ ನೆನಪಿಗಾಗಿ ಬಿಜೆಪಿ ಪಕ್ಷದವತಿಯಿಂದ ಅಂಬೇಡ್ಕರ್ ಅವರ ಸ್ಮಾರಕಗಳನ್ನು ನಿರ್ಮಿಸಿ ಅವರ ತತ್ವಗಳನ್ನು ಇಂದಿನ ಯುವ ಪೀಳಿಗೆಗೆ ಸಾರಲು ತೀರ್ಮಾನಿಸಿದೆ ಇದೇ ತಿಂಗಳ 11ರಂದು ವಿಧಾನಸೌಧದ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ರಥಯಾತ್ರೆಗೆ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಚಾಲನೆ ನೀಡಲಿದ್ದು ಅಂದು ಮಧ್ಯಾಹ್ನ 2:30 ಸುಮಾರಿಗೆ ಹಿರಿಯೂರಿನ ಜಾವನಗೊಂಡನಹಳ್ಳಿಯಲ್ಲಿ ರಥಯಾತ್ರೆ ಆಗಮಿಸಲಿದ್ದು ಬಿಜೆಪಿ ಪಕ್ಷದ ಜಿಲ್ಲಾ ಘಟಕದವತಿಯಿಂದ ಅದ್ದೂರಿಯಾಗಿ ಬರಮಾಡಿಕೊಳ್ಳಲಾಗುವುದು ಹಿರಿಯೂರು ಚಿತ್ರದುರ್ಗ ಭರಮಸಾಗರದಲ್ಲಿ ಸಭೆಗಳನ್ನು ಆಯೋಜಿಸಿದ್ದು ಅಂಬೇಡ್ಕರ್ ಅವರಿಗೆ ಕಾಂಗ್ರೆಸ್ ಮಾಡಿರುವ ಅವಮಾನಗಳ ಬಗ್ಗೆ ಸಾರ್ವಜನಿಕರಿಗೆ ತಿಳಿಸಲು ಬಿಜೆಪಿ ಪಕ್ಷವು ಮುಂದಾಗಿದ್ದು ಈ ಹಿನ್ನಲೆಯಲ್ಲಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು 15 ರಂದು ನಿಪ್ಪಾಣಿಯಲ್ಲಿ ಬೃಹತ್ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ತಿಳಿಸಿದರು.

ಬಿಜೆಪಿ ಪರಿಶಿಷ್ಟಜಾತಿ, ಪಂಗಡಗಳ ನಾಯಕರಾದಎನ್.ಮಹೇಶ,ಪಿ.ರಾಜೀವ್, ಮುನಿಸ್ವಾಮಿ ರಥಯಾತ್ರೆಯ ನೇತೃತ್ವ ವಹಿಸಿದ್ದಾರೆ. ಬೈಕ್‌ಗಳಲ್ಲಿ ರ್‍ಯಾಲಿ ನಡೆಸುವ ಮೂಲಕ ಜಿಲ್ಲೆಗೆ ರಥಯಾತ್ರೆಯನ್ನು ಬರಮಾಡಿಕೊಳ್ಳ ಲಾಗುವುದು. ಪಕ್ಷದ ಪಕದ ಮಾಜಿ ಸಚಿವರು, ಮಾಜಿ ಸಂಸದರು, ಹಾಲಿ ಮತ್ತು ಮಾಜಿ ಶಾಸಕರು, ಮುಖಂಡರು, ಕಾರ್ಯಕರ್ತರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ಸಮುದಾಯದವರು ಕಾರ್ಯಕ್ರಮದಲ್ಲಿ ಹೆಚ್ಚಿನ ಮತ್ತು ಅಂಬೇಡ್ಕರ್ ಹೆಸರು ಬಳಸಿಕೊಳ್ಳುವ ಕಾಂಗ್ರೆಸ್ ದಲಿತರಿಗೆ ಸೂಕ್ತ ಸ್ಥಾನಮಾನ, ಅವಕಾಶ ನೀಡಿಲ್ಲ. ಅಂಬೇಡ್ಕರ್ ಅವರನ್ನೂ ಗೌರವಯುತವಾಗಿ ನಡೆಸಿಕೊಳ್ಳಲಿಲ್ಲ. ಉರಿಯುವ ಮನೆಯಂತಿರುವ ಕಾಂಗ್ರೆಸ್ ಪಕ್ಷಕ್ಕೆ ಹೋಗದಂತೆ ಅಂದೇ ಅಂಬೇಡ್ಕರ್ ದಲಿತರಿಗೆ ಕಿವಿಮಾತು ಹೇಳಿದ್ದರು ಬಿಜೆಪಿ ಪಕ್ಷವು ಅಂಬೇಡ್ಕರ್ ಬಗ್ಗೆ ಅಪಾರ ಗೌರವ ಹೊಂದಿದ್ದು, ಅವರ ಆದರ್ಶ, ವಿಚಾರಗಳನ್ನು ತಿಳಿಸುವ ಪ್ರಯತ್ನವಾಗಿ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದ ಅವರು ಹಿರಿಯೂರಿನಿಂದ ಸಂಜೆ ಚಿತ್ರದುರ್ಗಕ್ಕೆಆಗಮಿಸುವರಥಯಾತ್ರೆಯೂ ಚಳ್ಳಕೆರೆ ಗೇಟಿನಿಂದ ಮದಕರಿ ವೃತ್ತದ ಮೂಲಕ ಅಂಬೇಡ್ಕರ್ ಪ್ರತಿಮಗೆ ಮಾಲಾರ್ಪಣೆ ಮಾಡಿ ಓನಕೆ ಒಬವ್ವ ವೃತ್ತದಲ್ಲಿ ಸಭೆಯನ್ನು ನಡೆಸಲಾಗುವುದು. ಇದರಲ್ಲಿ ರಾಜ್ಯ ಮಟ್ಟದ ಪಕ್ಷದ ನಾಯಕರ ಭಾಗವಹಿಸಲಿದ್ದಾರೆ ಎಂದರು.

ಬೆಂಗಳೂರಿನ ವಿಧಾನಸೌಧ ಮುಂಭಾಗದಿಂದ ಹೊರಟಿರುವ ರಥಯಾತ್ರೆಯು ನೆಲಮಂಗಲ, ಮಧುಗಿರಿ, ತುಮಕೂರು, ಚಿತ್ರದುರ್ಗ ದಾವಣಗೆರೆ ಹಾವೇರಿ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ ಮಾರ್ಗವಾಗಿ ನಿಪ್ಪಾಣಿಯನ್ನು ಏಪ್ರಿಲ್ 15ರಂದು ತಲುಪಲಿದೆ. ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ, ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನ ಮಂಡಲದ ಉಭಯ ಸದನಗಳ ಪ್ರತಿಪಕ್ಷ ನಾಯಕರು, ಈ ಶಾಸಕರು, ಮುಖಂಡರು, ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಅಲ್ಲಿ ಲಕ್ಷಾಂತರ ಜನರನ್ನು ಸೇರಿಸಿ, ಬಾಬಾಸಾಹೇಬ್ ಅಂಬೇಡ್ಕರ್ ಸಮಾವೇಶ ಮಾಡುವ ಮೂಲಕ ಅವರ ವಿಚಾರಧಾರೆ, ಆದರ್ಶಗಳನ್ನು ಇಂದಿನ ಜನಾಂಗಕ್ಕೆ ತಲುಪಿಸಲು ಕಾರ್ಯಕ್ರಮ ರೂಪಿಸಲಾಗಿದೆ ಎಂದು ತಿಳಿಸಿದರು.

ನೂರು ವರ್ಷಗಳ ಹಿಂದೆ ನಿಪ್ಪಾಣಿಯಲ್ಲಿ ನಡೆದ ಸಮಾವೇಶದಲ್ಲಿ ಅಂಬೇಡ್ಕರ್ ಅಸ್ಪೃಶ್ಯತೆ ನಿವಾರಣೆಗೆ ಶಿಕ್ಷಣದ ಅವಶ್ಯಕತೆ ಪ್ರತಿಪಾದಿಸಿ, ಹಾಸ್ಟೆಲ್‌ಗಳು ಮತ್ತು ವಸತಿ ಶಾಲೆಗಳಿಗೆ ಆದ್ಯತೆ ನೀಡಲು ತಿಳಿಸಿದ್ದರು. ದೇಶ, ರಾಜ್ಯದಲ್ಲಿ ಅತಿ ಹೆಚ್ಚಿನ ಅವಧಿಗೆ ಕಾಂಗ್ರೆಸ್ ಅಧಿಕಾರ ಚಲಾಯಿಸಿದೆ. ರಾಜ್ಯದಲ್ಲಿ 200 ಹಾಸ್ಟೆಲ್‌ಗಳು ಹಾಗೂ 100 ವಸತಿ ಶಾಲೆಗಳಿಗೆ ಸ್ವಂತ ಕಟ್ಟಡಗಳಿಲ್ಲ ಬೆಳಗಾವಿಯಲ್ಲಿ ಮಹಾತ್ಮಗಾಂಧಿ ಅಧ್ಯಕ್ಷತೆಯಲ್ಲಿ ಎಐಸಿಸಿ ಅಧಿವೇಶನ ನಡೆದು 100 ವರ್ಷ ತುಂಬಿದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಸಮಾವೇಶ ಏರ್ಪಡಿಸಿತ್ತು ಇದರಲ್ಲಿ ಅಂಬೇಡ್ಕರ್ ರವರ ಬಗ್ಗೆ ಯಾವ ಮಾತನ್ನು ಸಹಾ ಕಾಂಗ್ರೆಸ್ ಆಡಿಲ್ಲ, ಅಂಬೇಡ್ಕರ್ ರವರನ್ನು ಕಾಂಗ್ರೆಸ್ ಬರಿ ಮತ ಬ್ಯಾಂಕಿಗಾಗಿ ಉಪಯೋಗ ಮಾಡಿಕೊಳ್ಳುತ್ತಿದೆ ಅವರ ವಿಚಾರವನ್ನು ಜನತೆಗೆ ಮುಟ್ಟಿಸುವ ಕಾರ್ಯವನ್ನು ಕಾಂಗ್ರೆಸ್ ಮಾಡುತ್ತಿಲ್ಲ ಎಂದು ದೂರಿದರು.

ಗೋಷ್ಟಿಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಪತ್‌ಕುಮಾರ್, ಮುಖಂಡರಾದ ಮೋಹನ್, ರಘುಮೂರ್ತಿ, ವಕ್ತರರಾದ ನಾಗರಾಜ್ ಬೇದ್ರೇ, ದಗ್ಗೆ ಶಿವಪ್ರಕಾಶ್ ಶಂಭು, ರವಿ ಮಹಾಂತಣ್ಣ ಭಾಗವಹಿಸಿದ್ದರು.

## ಶಾಂತಿಯ ಪರಿಪಾದಕರಾದ ಮಹಾವೀರರು ಸದಾ ಆದರ್ಶಪ್ರಾಯರು: ಶಾಸಕ ಟಿ.ರಘುಮೂರ್ತಿ

» **ಚಳ್ಳಕೆರೆ**



ತನ್ನೇಲ್ಲಾ ಬೋಗಗಳನ್ನು ತ್ಯಾಗಮಾಡಿ ಸಮಾಜದ ಎಲ್ಲಾ ವರ್ಗಗಳಲ್ಲಿ ಶಾಂತಿ ನೆಲೆಸುವ ನಿಟ್ಟಿನಲ್ಲಿ ನಿರಂತರ ಹೋರಾಡಿದ ಮಹಾನ್ ಶ್ರೇಷ್ಠಯೋಗಿ ಮಹಾವೀರರು ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಬಳಿಯ ಜೈನಸಮುದಾಯ ಭವನದಲ್ಲಿ ಜೈನಸಮುದಾಯ ಹಮ್ಮಿಕೊಂಡಿದ್ದ 2624ನೇ ಮಹಾವೀರ ಜನ್ಮಕಲ್ಯಾಣೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಮಹಾವೀರರ ಜೈನ ಸಂತತಿ ಶಾಂತಿಪರಿಪಾಲನೆಯ ಮೂಲಕವೇ ಖ್ಯಾತರಾದವರು.

ಪುಟ 2

## ಶ್ರೀ ಮಹಾವೀರರು ಚಿಕ್ಕ ವಯಸ್ಸಿನಲ್ಲೆ ಹಲವು ನಿಯಮಗಳನ್ನ ಸ್ವೀಕರಿಸಿ ಪಾಲಿಸಿದವರು-ತಿಮ್ಮರಾಜು



**ಹೊಸದುರ್ಗ:** ಮಾನವತಾವಾದಿ ಮಂಗಲಮಯ ಶ್ರೀ ಮಹಾವೀರರು ಚಿಕ್ಕ ವಯಸ್ಸಿನಲ್ಲೆ ಹಲವು ನಿಯಮಗಳನ್ನ ಸ್ವೀಕರಿಸಿ ಪಾಲಿಸಿದವರು ಹಾಗೆಯೇ ನಡೆದುಕೊಂಡವರು ಎಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ತಿಳಿಸಿದರು. ಪಟ್ಟಣದ ಪುರಸಭೆಯಲ್ಲಿ ಗುರುವಾರ ಆಯೋಜಿಸಲಾಗಿದ್ದ ಜೈನ ಶ್ರೀ ಮಹಾವೀರ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಪುಟ 2

**ಪ್ರಮುಖ ಸುದ್ದಿ**

### ಜಿಟಿಟಿಸಿ ಕೇಂದ್ರದ ಪರಿಶ್ರಮದಿಂದ ನೂರಾರು ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶ

# ಜಿಟಿಟಿಸಿ ಕೇಂದ್ರದ ಸಾಧನೆ ಬಗ್ಗೆ ಹೆಮ್ಮೆ: ಶಾಸಕ ಟಿ.ರಘುಮೂರ್ತಿ

» **ಚಳ್ಳಕೆರೆ**




ಚಳ್ಳಕೆರೆ ವಿಧಾನಸಭಾ ಕ್ಷೇತ್ರವೂ ಸೇರಿದಂತೆ ರಾಜ್ಯದ ಇತರೆ ಭಾಗಗಳಿಂದಲೂ ವಿದ್ಯಾರ್ಥಿಗಳು ಇಲ್ಲಿನ ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರ(ಜಿಟಿಟಿಸಿ) ದಾಖಲಾತಿ ತರಬೇತಿ ಪಡೆದುಕೊಂಡ ನಂತರ ಉದ್ಯೋಗದ ಅವಕಾಶವನ್ನು ಸಹ ಪಡೆಯುತ್ತಿರುವುದು ಸಂತಸ ತಂದಿದೆ. ಪ್ರತಿವರ್ಷ ಇಲ್ಲಿ ಕಲಿತ ನೂರಾರು ವಿದ್ಯಾರ್ಥಿಗಳು ಉದ್ಯೋಗ ಪಡೆಯುವ ಮೂಲಕ ತಮ್ಮ ಭವಿಷ್ಯದ ಬದುಕು ಕಟ್ಟಿಕೊಳ್ಳಲು ಜಿಟಿಟಿಸಿ ನೆರವಾಗುತ್ತಿದೆ. ವಿಶೇಷವಾಗಿ ಪ್ರಾಂಶುಪಾಲ ಜಿ.ಆರ್.ತಿಪ್ಪೇಸ್ವಾಮಿ ಮತ್ತು ಸಿಬ್ಬಂದಿ ವರ್ಗ ಉತ್ತಮ ತರಬೇತಿ ಮೂಲಕ ವಿದ್ಯಾರ್ಥಿಗಳ ಭವಿಷ್ಯಕ್ಕೆ ಭದ್ರವಾದ ಬುನಾದಿ ನಿರ್ಮಿಸಿದ್ದಾರೆ. ಇದು ಎಲ್ಲರಿಗೂ ಹೆಮ್ಮೆ ತರುವ ವಿಷಯವೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಗುರುವಾರ ನಗರದ ಜಿಟಿಟಿಸಿ ಕೇಂದ್ರದಲ್ಲಿ ತರಬೇತಿನಂತರ ಔದ್ಯೋಗಿಕ ತರಬೇತಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ನಿಯೋಜನಾ ಪತ್ರ ವಿತರಿಸುವ ಆಲೋಹ ಜ್ಯೋತಿಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಪ್ರಾಂಶುಪಾಲ ಜಿ.ಆರ್. ತಿಪ್ಪೇಸ್ವಾಮಿಯವರ ಪರಿಶ್ರಮದ ಬಗ್ಗೆ ಮಾಹಿತಿ ಪಡೆದ ಸರ್ಕಾರ ಅವರನ್ನು ವಿಭಾಗಿಯ ಅಧಿಕಾರಿಯನ್ನಾಗಿ ನೇಮಿಸಿದ್ದು ಇದರಿಂದ ರಾಜ್ಯದ ಬಹುತೇಕ ಜಿಟಿಟಿಸಿ ವಿದ್ಯಾರ್ಥಿಗಳಿಗೆ ಇನ್ನೂ ಹೆಚ್ಚಿನ ಸೌಲಭ್ಯ ಸುಲಭವಾಗಿ ದೊರೆಯಲು ಅನುಕೂಲವಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಮಧ್ಯ ಕರ್ನಾಟಕ ವಲಯ ಅಧಿಕಾರಿ, ಪ್ರಾಂಶುಪಾಲ ಜಿ.ಆರ್.ತಿಪ್ಪೇಸ್ವಾಮಿ, ಕಳೆದ 2022ರಲ್ಲಿ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಪರಿಶ್ರಮದಿಂದ ಈ ಭಾಗದಲ್ಲಿ ಜಿಟಿಟಿಸಿ ಕೇಂದ್ರ ಆರಂಭಗೊಂಡಿತು. ಪ್ರತಿವರ್ಷ ಸಿಬ್ಬಂದಿ ವರ್ಗ ಉತ್ತಮ ತರಬೇತಿ ಮೂಲಕ ವಿದ್ಯಾರ್ಥಿಗಳಿಗೆ ನೆರವಾಗುತ್ತಿದ್ದಾರೆ, ಇಲ್ಲಿ ತರಬೇತಿ ಪಡೆದ ಬಹುತೇಕ ಎಲ್ಲಾ ವಿದ್ಯಾರ್ಥಿಗಳು ಉದ್ಯೋಗಾವಕಾಶವನ್ನು ಪಡೆಯುವಂತಹ ವಾತಾವರಣ ನಿರ್ಮಾಣವಾಗಿದೆ. ಬಹುತೇಕ ಮಧ್ಯಮ ವರ್ಗದ ವಿದ್ಯಾರ್ಥಿಗಳು ನಮ್ಮ ಕೇಂದ್ರಕ್ಕೆ ದಾಖಲಾಗಿದ್ದಾರೆ, ಕಳೆದ 2024ರಲ್ಲಿ 64 ವಿದ್ಯಾರ್ಥಿಗಳು, 2025ರಲ್ಲಿ 78 ವಿದ್ಯಾರ್ಥಿಗಳು ಉದ್ಯೋಗಾವಕಾಶವನ್ನು ಪಡೆದಿದ್ದಾರೆ. ಉದ್ಯೋಗ ಪಡೆದ ವಿದ್ಯಾರ್ಥಿಗಳು ಕನಿಷ್ಟ 15ರಿಂದ30 ಸಾವಿರತನಕ ವೇತನ ಪಡೆಯಲು ಸಹಕಾರಿಯಾಗಿದೆ ಎಂದರು. ವಿದ್ಯಾರ್ಥಿಗಳ ತರಬೇತಿ ಕಾರ್ಯದಲ್ಲಿ ಆಸಕ್ತಿ ವಹಿಸುವ ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗವನ್ನು ಅಭಿನಂದಿಸುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಆರ್.ಮಂಜುಳಾ, ಉಪಾಧ್ಯಕ್ಷ ಸುಮ, ಸ್ಥಾಯಿಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ಸದಸ್ಯರಾದಸುಜಾತ,ಕವಿತಾ,ಕೆ.ವೀರಭದ್ರಪ್ಪ ಮುಂತಾದವರು ಭಾಗವಹಿಸಿದ್ದರು.

ಫಾಸ್ಟ್ ನ್ಯೂಸ್

## ಶಾಂತಿ ಪರಿಪಾದಕರಾದ ಮಹಾವೀರರು ಸದಾ ಆದರ್ಶಪ್ರಾಯರು: ಶಾಸಕ ಟಿ.ರಘುಮೂರ್ತಿ

» ಮೊದಲ ಪುಟದಿಂದ


ಇಂದಿಗೂ ಈ ಸಮಾಜದಲ್ಲಿ ಪರಸ್ಪರ ಪ್ರೀತಿ, ವಿಶ್ವಾಸ, ನಂಬಿಕೆ ಮನೆ ಮಾಡಿದೆ. ಮಹಾವೀರರ ಆದರ್ಶಗಳನ್ನು ಪಾಲನೆ ಮಾಡುವುದರಲ್ಲಿ ಅವರು ಎಂದೂಹಿಂದೆಉಳಿದಿಲ್ಲ.ಇಂದಿಗೂಮಹಾವೀರರು ಎಲ್ಲರಿಗೂ ಆದರ್ಶರಾಗಿದ್ದಾರೆಂದರು. ತಾಲ್ಲೂಕು ಕಚೇರಿಯಲ್ಲೂ ಮಹಾವೀರ ಜಯಂತಿ :– ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ, ಜೈನ ಸಮುದಾಯದ ಮುಖಂಡರೊಂದಿಗೆ ತಾಲ್ಲೂಕು ಕಚೇರಿಯಲ್ಲಿ ಮಹಾವೀರ ಜಯಂತಿ ಆಚರಿಸಲಾಯಿತು. ಜೈನಸಮಾಜದ ಗೌರವಾಧ್ಯಕ್ಷ ಡಿ.ಅಂಬಣ್ಣ,ಅಧ್ಯಕ್ಷ ಡಿ.ಭರತರಾಜ್,ಕಾರ್ಯದರ್ಶಿ ಗೌರಿಪುರಪಾಶ್ವನಾಥ, ಡಿ.ವಿಜಯೇಂದ್ರ, ಪ್ರಭಾಕರ, ಎನ್.ಜೆ.ವೆಂಕಟೇಶ್, ಮಿಥನ್, ರತ್ನರಾಜ, ನಾಗರಾಜ, ವಿಮುಕ್ತ, ಕುಂದನ್, ಚೇತನ್, ದರ್ಶನ್, ರಾಜೇಶ್, ಉತ್ತಮ್, ನವೀನ್, ತಹಶೀಲ್ದಾರ್ ರೇಹಾನ್‌ಪಾಷ, ನಗರಸಭೆ ಅಧ್ಯಕ್ಷೆ ಆರ್.ಮಂಜುಳಾ, ಉಪಾಧ್ಯಕ್ಷ ಸುಮ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ಸದಸ್ಯ ಕೆ.ವೀರಭದ್ರಪ್ಪ, ನಾಮಿನಿ ಸದಸ್ಯರಾದ ಬಡಗಿಪಾಪಣ್ಣ, ಗ್ಯಾರಂಟಿ ಸಮಿತಿ ತಾಲ್ಲೂಕು ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ತಾಲ್ಲೂಕುಕೆಡಿಪಿ ಸದಸ್ಯ ಅಂಗಡಿರಮೇಶ್, ಕಾಂಗ್ರೆಸ್ ಮುಖಂಡ ಎಸ್.ಎಚ್.ಸೈಯದ್, ಆರ್.ಪ್ರಸನ್ನಕುಮಾರ್ ಮುಂತಾದವರು ಭಾಗವಹಿಸಿದ್ದರು.

## ಶ್ರೀ ಮಹಾವೀರರು ಚಿಕ್ಕ ವಯಸ್ಸಿನಲ್ಲೆ ಹಲವು ನಿಯಮಗಳನ್ನ ಸ್ವೀಕರಿಸಿ ಪಾಲಿಸಿದವರು-ತಿಮ್ಮರಾಜು

» ಮೊದಲ ಪುಟದಿಂದ

ಅವರಲ್ಲಿ ಶೋಷಿತರ ಬಗ್ಗೆ ಕರುಣ್ಯ ಭಾವವಿತ್ತು,ಅವರ ಲೋಕ ಕಲ್ಯಾಣ ಮತ್ತು ಆತ್ಮಕಲ್ಯಾಣದ ಗುರು ವೃದ್ದಿಸುತ್ತಾ ಸಾಗಿತ್ತು,ಹೀಗೆ ಮಹಾವೀರರು ತಮ್ಮ ಸಾಧಕ ಜೀವನದ ಹನ್ನೆರಡು ವರ್ಷಗಳನ್ನು ಅನೇಕ ಕಷ್ಟ ನಷ್ ಹಾಗೂ ತೊಂದರೆಗಳೊಂದಿಗೆ ಸಾಧನೆ ಮಾಡಿದರು ತಮಗೆ ಸಿದ್ದಿಸಿದ ಕೇವಲ ಜ್ಞಾನದ ಬೇಳಕಿನಲ್ಲಿ ಕಂಡ ಸತ್ಯವನ್ನು ಮತ್ತು ಸಾರವನ್ನು ಸಿದ್ದಾಂತಗಳನ್ನು ಜನರಿಗೆ ತಿಳಿಸಲು ಸಮವಸರಣದಲ್ಲಿ ನಾಡಿನಾಧ್ಯಂತ ಶ್ರೀ ವಿಹಾರ ಕೈಗೊಂಡು ಅಂದಿನ ಜನರ ಮಾತ್ರ ಭಾಷೆಯಾದ ಅರ್ಧಮಾಗದಿ ಭಾಷೆಯಲ್ಲಿ ಉಪದೇಶ ನೀಡಿದರು ಎಂದು ವಿವರಿಸಿದರು. ಪುರಸಭಾ ಅಧ್ಯಕ್ಷೆ ರಾಜೇಶ್ವರಿಆನಂದ್ ಅಧ್ಯಕ್ಷತೆ ವಹಿಸಿದ್ದರು.ಪರಿಸರ ವಿಭಾಗದ ಬಸವರಾಜ್,ಕಲ್ಪನ,ವ್ಯವಸ್ಥಾಪಕಿ ಸಾವಿತ್ರಮ್ಮ,ನೇಮಿಕಾಂತ್ ಸೇರಿದಂತೆ ಪುರಸಭಾ ಸಿಬ್ಬಂಧಿ ವರ್ಗ, ಪುರಸಭಾ ಸದಸ್ಯರುಗಳು ಹಾಗೂ ಜೈನ ಸಮಾಜದ ಮುಖಂಡರುಗಳು ಭಾಗವಹಿಸಿದ್ದರು. ಕಾರ್ಯಕ್ರಮಕ್ಕೂ ಮುನ್ನ ಶ್ರೀ ಮಹಾವೀರರ ಭಾವಚಿತ್ರಕ್ಕೆ ಪುಷ್ಪ ನಮನ ಅರ್ಪಿಸಲಾಯಿತು.

## ಚೌಡೇಶ್ವರಿ ಅಮ್ಮನವರ ಜಾತ್ರೋತ್ಸವವೂ 14ರಿಂದ



» ಚಿತ್ರದುರ್ಗ

ಶ್ರೀ ಹರಿಮತಿ ಚೌಡೇಶ್ವರಿ ಅಮ್ಮನವರ ಜೀರ್ಣೋದ್ಧಾರ ಟ್ರಸ್ಟ್‌ವತಿಯಿಂದ ಹೊಳಲ್ಕೆರೆ ಟೌನ್ ಮಂಜುನಾಥ ಸ್ಕೂಲ್ ರೋಡ್‌ನಲ್ಲಿನ ಶ್ರೀ ಹರಿಮತಿ ಚೌಡೇಶ್ವರಿ ಅಮ್ಮನವರ ಜಾತ್ರೋತ್ಸವವೂ ಏ. 14 ಮತ್ತು 15 ರಂದು ನಡೆಯಲಿದೆ ಎಂದು ಶ್ರೀ ಹರಿಮತಿ ಚೌಡೇಶ್ವರಿ ಅಮ್ಮನವರ ಜೀರ್ಣೋದ್ಧಾರ ಟ್ರಸ್ಟ್ ಅಧ್ಯಕ್ಷರು ಎಮ್ ಸತೀಶ್ ಕುಮಾರ್ ತಿಳಿಸಿದ್ದಾರೆ. ಜಾತ್ರೋತ್ಸವದ ಅಂಗವಾಗಿ ಏ. 14 ರಂದು ಅಮ್ಮನವರು ಮಧು ಒಣಗಿತ್ತಿ ಕಾರ್ಯಕ್ರಮ, ಏ. 15 ರಂದು ಬೆಳಿಗ್ಗೆ 6:30 ರಿಂದ ಗಂಗಾ ಪೂಜೆ ಪೂಜೆಯ ನಂತರ 7:30ಕ್ಕೆ ಕೆಂಡಾರ್ಚನೆ ಇರುತ್ತದೆ ನಂತರ ಭಕ್ತಾದಿಗಳಿಗೆಲ್ಲ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಲಿದೆ. ಈ ಕಾರ್ಯಕ್ರಮಕ್ಕೆ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸದಸ್ಯರಾದ ಗೋವಿಂದ ಕಾರಜೋಳ ರವರು ಆಗಮಿಸಲಿದ್ದಾರೆ. ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕಾಗಿ ಕೋರಿದೆ ಹೆಚ್ಚಿನ ಮಾಹಿತಿಗಾಗಿ 98444 66691, 8147298002, 8861931601 ಮೊಬೈಲ್ ಸಂಖ್ಯೆಯನ್ನು ಸಂಪರ್ಕ ಮಾಡಬಹುದಾಗಿದೆ ಎಂದು ಶ್ರೀ ಹರಿಮತಿ ಚೌಡೇಶ್ವರಿ ಅಮ್ಮನವರ ಜೀರ್ಣೋದ್ಧಾರ ಟ್ರಸ್ಟ್ ಅಧ್ಯಕ್ಷರು ಎಮ್ ಸತೀಶ್ ಕುಮಾರ್ ತಿಳಿಸಿದ್ದಾರೆ.

### ಶ್ರೀ ಭಗವಾನ್ ಮಹಾವೀರ ಜಯಂತಿಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

# ಮನುಕುಲಕ್ಕೆ ಅಹಿಂಸಾ ತತ್ವ ಪಾಲನೆ ಅವಶ್ಯ

» ಚಿತ್ರದುರ್ಗ

ಜಗತ್ತಿಗೆ ಶಾಂತಿ ಹಾಗೂ ಅಹಿಂಸೆಯನ್ನು ಬೋಧಿಸಿ ಜೈನಧರ್ಮದ ಉಗಮದಲ್ಲಿ ಪ್ರಮುಖ ಪಾತ್ರವಹಿಸಿರುವ ಮಹಾವೀರರ ಆದರ್ಶ, ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಜಗತ್ತಿನ ಸರ್ವತೋಮುಖ ಒಳಿತನ್ನು ಬಯಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಶ್ರೀ ಭಗವಾನ್ ಮಹಾವೀರ ಜಯಂತಿ ಆಚರಣೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಜಗತ್ತಿಗೆ ಹಾಗೂ ಮನುಕುಲಕ್ಕೆ ಅಹಿಂಸಾ ತತ್ವ ಬಹಳ ಅವಶ್ಯಕವಾಗಿದೆ. ಅಂತಹ ಮನುಕುಲಕ್ಕೆ ದಾರಿದೀಪವಾಗಿ ಜಗತ್ತಿಗೆ ಬೆಳಕು ನೀಡಿದವರು ಭಗವಾನ್ ಮಹಾವೀರರು. ವಿಶ್ವದಲ್ಲಿ ಶಾಂತಿ ನೆಲೆಸಬೇಕಾದರೆ ಜೈನ ಧರ್ಮದ ತತ್ವಗಳನ್ನು ನಾವು ಅನುಸರಿಸಬೇಕು. ಅಹಿಂಸಾ ತತ್ವ ಪಾಲನೆ ಮಾಡದಿದ್ದರೆ ಸಾವು, ನೋವು, ಯುದ್ಧಗಳಿಂದಾಗಿ ಜಗತ್ತು ವಿನಾಶದ ಅಂಚಿಗೆ ತಲುಪಲಿದೆ. ಬೇರೆ ಬೇರೆ ಪರಿಣಾಮಗಳಿಂದ ಮನುಷ್ಯ ತನ್ನ ಅಸ್ತಿತ್ವವನ್ನೂ ಕಳೆದುಕೊಳ್ಳುತ್ತಾರೆ ಎಂದು ತಿಳಿಸಿದ ಅವರು, ಜೈನಧರ್ಮದ ಮೂಲ ತತ್ವ 'ನೀನು ಜೀವಿಸು ಇತರರನ್ನು ಜೀವಿಸಲು ಬಿಡು' ಎಂಬುದಾಗಿದೆ. ಮನುಷ್ಯರು ಅರಿಷಡ್ವರ್ಗಗಳನ್ನು ತ್ಯಜಿಸಬೇಕು. ಮುಖ್ಯವಾಗಿ ಮನುಷ್ಯರನ್ನು ಮನುಷ್ಯರಂತೆ ಕಾಣುವ ಮೂಲಕ ಶಾಂತಿ ಹಾಗೂ ಪ್ರೀತಿಯಿಂದ ಬದುಕುಬೇಕು ಎಂದು ಹೇಳಿದರು.



ಕನ್ನಡ ಸಾಹಿತ್ಯ ಮತ್ತು ಸಂಸ್ಕೃತಿಗೆ ಜೈನಧರ್ಮದ ಕೊಡುಗೆ ಅಪಾರವಾದುದು. ನಮ್ಮ ಮುಂದಿನ ಯುವ ಪೀಳಿಗೆಗೆ ಜೈನಧರ್ಮ ಮತ್ತು ಜೈನ ಸಾಹಿತ್ಯದ ಮಹತ್ವ ತಿಳಿಸುವ ಕೆಲಸವಾಗಬೇಕು ಎಂದು ಸಲಹೆ ನೀಡಿದರು.

ಹರಿಯಬ್ಬೆ ಸರ್ಕಾರಿ ಪದವಿಪೂರ್ವ ಕಾಲೇಜು ಉಪನ್ಯಾಸಕ ಟಿ.ತಿಪ್ಪೇಸ್ವಾಮಿ ಉಪನ್ಯಾಸ ನೀಡಿ, ವಿಶ್ವ ಕಲ್ಯಾಣ ಹಾಗೂ ವಿಶ್ವ ಶಾಂತಿಗೆ ಇಂದು ಜೈನಧರ್ಮದ ತತ್ವಗಳ ಪಾಲನೆ ಅತ್ಯವಶ್ಯಕವಾಗಿದೆ. ಇಂದಿನ ಯುದ್ಧ, ಕಲಹ, ಪೀಡೆ, ಹಿಂಸೆ ಇವುಗಳ ನಡುವೆ ಅಹಿಂಸೆ ಬೋಧಿಸಿದ್ದು ಜೈನಧರ್ಮವಾಗಿದೆ ಎಂದು ಹೇಳಿದರು.

ಮಹಾತ್ಮಾ ಗಾಂಧೀಜಿಯವರು ಭಗವಾನ್ ಮಹಾವೀರರ ಮೌಲ್ಯಗಳನ್ನಿಟ್ಟುಕೊಂಡು ದೇಶಕ್ಕೆ ಸ್ವಾತಂತ್ಯ ತಂದುಕೊಟ್ಟಿದ್ದಾರೆ. ಸತ್ಯ, ಅಹಿಂಸೆ, ಅಪರಿಗ್ರಹ, ಬ್ರಹ್ಮಚರ್ಯೆ ಎಂಬ ಐದು ತತ್ವಗಳು ಸರ್ವಕಾಲಿಕವಾಗಿದ್ದು, ಪ್ರಚಂಚಕ್ಕೆ ಅತ್ಯವಶ್ಯಕವಾಗಿದೆ ಎಂದು ಅಭಿಪ್ರಾಯಪಟ್ಟರು.

ಬೌದ್ಧಧರ್ಮದಂತೆ ಜೈನಧರ್ಮದ ತತ್ವಗಳು ವಿಶ್ವದಾದ್ಯಂತ ವ್ಯಾಪಿಸಬೇಕು ಎಂದು ತಿಳಿಸಿದ ಅವರು, ಜೈನಧರ್ಮದ ಕವಿಗಳು ಜ್ಯೋತಿಷ್ಯ, ವ್ಯಾಕರಣ, ಛಂದಸ್ಸು, ಕಾವ್ಯಮೀಮಾಂಸೆ, ಸಾಹಿತ್ಯ ಗ್ರಂಥಗಳು, ಗದ್ಯ ಕೃತಿಗಳು ಸೇರಿದಂತೆ ಕನ್ನಡ ಸಾಹಿತ್ಯಕ್ಕೆ ಉತ್ತಮ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಮಾತನಾಡಿ, ಅಹಿಂಸೆಯೇ ಪರಮ ಧರ್ಮ ಎಂಬುವುದು ಭಗವಾನ್ ಮಹಾವೀರರ ಸಾರ್ವಕಾಲಿಕ ಸತ್ಯವಾದ ಸಂದೇಶವಾಗಿದ್ದು, ಅಹಿಂಸಾ ತತ್ವ ಅಳವಡಿಸಿಕೊಂಡರೆ ಉತ್ತಮ ಜೀವನ ಸಾಗಿಸಬಹುದಾಗಿದೆ ಎಂದು ಹೇಳಿದರು.

ಜೈನ್ ಸಂಘದ ವಸ್ತಿಮಲ್ ಮಾತನಾಡಿ, ಮಹಾವೀರರು ಸರಳ ಬೋಧನೆ "ಜಿಯೋ ಜೀನೇದೋ" ಇದರ ಅರ್ಥ ನೀವು ಬದುಕಿ ಇತರರಿಗೂ ಬದುಕಲು ಬಿಡಿ ಎಂಬುದಾಗಿದೆ. ಕಾಮ, ಕ್ರೋಧ, ಮೋಹ, ಮದ, ಮಾತ್ಸರ್ಯಗಳನ್ನು ಜಯಿಸಿದರೆ ಮುಕ್ತಿ ಪಡೆಯಬಹುದಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಡಾ.ಕೆ.ರಮೇಶ್ ಅವರ ಕನ್ನಡ ಜೈನ ಹಾಡುಗಳು ಸಾಂಸ್ಕೃತಿಕ ಅಧ್ಯಯನ ಹಾಗೂ ಡಾ. ಕಣುಮಪ್ಪ ಅವರ ಕನ್ನಡದಲ್ಲಿ ಧರ್ಮನಾಥ ಪುರಾಣ ತೌಲನಿಕ ಅಧ್ಯಯನ ಕುರಿತ ಪುಸ್ತಕಗಳನ್ನು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಲೋಕರ್ಪಣೆಗೊಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ, ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನ್ ಖುರೇಷಿ, ತಹಶೀಲ್ದಾರ್ ಗೋವಿಂದರಾಜ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ್, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಜೈನ್ ಸಂಘದ ರಂಜಿತ್, ಅಶೋಕ್ ಕುಮಾರ್, ರಿಕಬ್ ಚಂದ್, ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ, ಡಾ.ಕೆ.ಮೋಹನ್ ಕುಮಾರ್, ನಿರೂಪಕ ನವೀನ್ ಮಸ್ಕಲ್ ಇದ್ದರು. ಆಯಿತೋಳ ಜಿ.ವಿ.ಮಾರುತೇಶ್ ಮತ್ತು ತಂಡದವರು ಗೀತಗಾಯನ ನಡೆಸಿಕೊಟ್ಟರು.

# ಕವಿ ಶಾಂತರಸರ 100ನೇ ಜನ್ಮಶತಮಾನೋತ್ಸವ



» ಚಿತ್ರದುರ್ಗ

ಓದುಗರಲ್ಲಿ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಬಿತ್ತಿ ಕಥೆ, ಕವಿತೆ, ಕಾದಂಬರಿ ಮೂಲಕ ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಕವಿ ಶಾಂತರಸ ಕೊಡುಗೆ ನೀಡಿದ್ದಾರೆಂದು

ಹಿರಿಯೂರಿನ ಜ್ಞಾನಭಾರತಿ ವಿದ್ಯಾಸಂಸ್ಥೆ ಸಂಸ್ಥಾಪಕ ಅಧ್ಯಕ್ಷ ಡಾ.ವಿ.ಬಸವರಾಜ್ ಹೇಳಿದರು.ಬಹುಮುಖಿ ಕಲಾ ಕೇಂದ್ರ ಚಿತ್ರದುರ್ಗ, ಸಂಸ ಥಿಯೇಟರ್ ಬೆಂಗಳೂರು ಇವರುಗಳ ಸಹಯೋಗದೊಂದಿಗೆ ಹಿರಿಯೂರಿನ ಜ್ಞಾನಭಾರತಿ ವಿದ್ಯಾಸಂಸ್ಥೆ ಆವರಣದಲ್ಲಿ ನಡೆದ ಶಾಂತರಸರ 100 ನೇ ಜನ್ಮ ಶತಮಾನೋತ್ಸವ ಉದ್ಘಾಟಿಸಿ ಮಾತನಾಡಿದರು.ಶಾಂತರಸ ಕವಿಗಳು ಪ್ರಾಥಮಿಕ ಶಾಲಾ ಶಿಕ್ಷಕರಾಗಿ, ಜೂನಿಯರ್ ಕಾಲೇಜುಪ್ರಾಚಾರ್ಯರಾಗಿಸೇವೆಸಲ್ಲಿಸಿನಿವೃತ್ತಿಯ ನಂತರ ಮಾನವೀಯತೆಯ ಪ್ರತಿಪಾದಕರಾಗಿ ಸೇವೆ ಸಲ್ಲಿಸಿದರು. ಪುಸ್ತಕ ಪ್ರೇಮಿಯಾಗಿದ್ದ ಅವರು ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದರು. ಶಿವಶರಣರ ಮನೋಧರ್ಮವನ್ನು ಉಸಿರಾಗಿಸಿಕೊಂಡು ಕನ್ನಡಪರ ಚಟುವಟಿಕೆಗಳಲ್ಲಿ ಸದಾ ತೊಡಗಿಕೊಳ್ಳುತ್ತಿದ್ದರು. ರಾಜ್ಯೋತ್ಸವ ಪ್ರಶಸ್ತಿಯನ್ನು ತಿರಸ್ಕರಿಸಿ ದಿಟ್ಟತನ ಮೆರೆದ ಅವರು ನಿಷ್ಟುರವಾದಿಯಾಗಿದ್ದರೆಂದು ಗುಣಗಾನ ಮಾಡಿದರು.ಉಪನ್ಯಾಸಕ ಸಲಬೊಮ್ಮನಹಳ್ಳಿ ಆರ್.ಶಿವಣ್ಣ ಮಾತನಾಡಿ ಶಾಂತರಸರವರ ಮೂಲ ಹೆಸರು ಶಾಂತಯ್ಯ. ರಾಯಚೂರು ಜಿಲ್ಲೆಯ ಹೆಂಬರಾಳು ಗ್ರಾಮದಲ್ಲಿ 1924 ಏಪ್ರಿಲ್7 ರಂದು ಜನಿಸಿದರು.

ಬ್ರಾಹ್ಮರಾಗಿ ಹುಟ್ಟಿ ಬ್ರಾಹ್ಮಣ್ಯವನ್ನು ತೊರೆದು ಇಲ್ಲಿನ ಕಂಚಾಚಾರ, ರೂಢಿ, ಸಂಪ್ರದಾಯ, ಮೂಢನಂಬಿಕೆಗಳ ವಿರುದ್ಧ ಹೋರಾಡಿದರು. ಕನ್ನಡ ಭಾಷೆ ಉಳಿವಿಗಾಗಿ ಆರು ದಶಕಗಳ ಕಾಲ ಚಳುವಳಿಯಲ್ಲಿ ತೊಡಗಿ ಗೋಕಾಕ್ ಚಳುವಳಿಗೆ ಕಾವು ಹಚ್ಚಿದರು.

ಕುವೆಂಪು, ಹರಿಹರ ಕವಿಗಳ ಬರವಣಿಗೆ ಇವರ ಮೇಲೆ ಗಾಢ ಪ್ರಭಾವ ಬೀರಿತು ಎಂದು ಸ್ಮರಿಸಿದರು.ಉದಯೋನ್ಮುಖ ಬರಹಗಾರರನ್ನು ಉತ್ತೇಜಿಸಲು ಸತ್ಯ ಸ್ನೇಹಿ ಎಂಬ ಪ್ರಕಾಶನ ಆರಂಭಿಸಿ 50 ಕ್ಕೂ ಹೆಚ್ಚು ಕೃತಿಗಳನ್ನು ಕನ್ನಡ ನಾಡಿಗೆ ಸಮರ್ಪಿಸಿದರು. 1942 ರಲ್ಲಿ ಬ್ರಿಟೀಷರೆ ಭಾರತ ಬಿಟ್ಟು ತೊಲಗಿ ಚಳುವಳಿಯಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. 2006 ರಲ್ಲಿ ಬೀದರ್‌ನಲ್ಲಿ ನಡೆದ 72 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿದ್ದರೆನ್ನುವುದನ್ನುನೆನಪಿಸಿಕೊಂಡರು. ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ವೇದಿಕೆ ಜಿಲ್ಲಾ ಘಟಕದ ಅಧ್ಯಕ್ಷ ಎಸ್.ಜಿ.ರಂಗಸ್ವಾಮಿ ಸಕ್ಕರ ಮಾತನಾಡಿ ಕವಿ ಶಾಂತರಸ ವೃತ್ತಿಯಲ್ಲಿ ಶಿಕ್ಷಕರಾಗಿ, ಉಪನ್ಯಾಸಕರಾಗಿಪ್ರಾಚಾರ್ಯರಾಗಿ ಸೇವೆ ಸಲ್ಲಿಸಿದ್ದಾರೆ. ಪ್ರವೃತ್ತಿಯಲ್ಲಿ ಸಾಹಿತಿಗಳಾಗಿ ಬರಹಗಾರರಾಗಿರಾಜ್ಯದಲ್ಲಿಗುರುತಿಸಿಕೊಂಡವರು ಎಂದು ಗುಣಗಾನ ಮಾಡಿದರು.

ಜ್ಞಾನಭಾರತಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಎನ್.ಧನಂಜಯ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಖ್ಯಾತ ರಂಗಕರ್ಮಿ ಮಲ್ಲಪ್ಪನಹಳ್ಳಿ ಮಹಾಲಿಂಗಪ್ಪ, ಬಹುಮುಖಿ ಕಲಾ ಕೇಂದ್ರದ ಕಾರ್ಯದರ್ಶಿ ಟಿ.ಮಧು,ಟಿ.ಶ್ರೀನಿವಾಸಮೂರ್ತಿ, ದೊರೇಶ್ ಹಾಗೂ ಇನ್ನಿತರರು ಹಾಜರಿದ್ದರು.

## ಜಗತ್ತಿಗೆ ಅಹಿಂಸೆಯ ತತ್ವವನ್ನು ಸಾರಿದ ಮಹಾನ್ ಚೇತನ



» ದಾವಣಗೆರೆ

ಕ್ರಿ.ಪೂ.6ನೇ ಶತಮಾನದಲ್ಲಿಯೇ ಜಗತ್ತಿಗೆ ಸತ್ಯ ಮತ್ತು ಅಹಿಂಸೆ ತತ್ವವನ್ನು ಸಾರಿದ ಮಹಾನ್ ಚೇತನ, ಭಗವಾನ್ ಮಹಾವೀರ ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಅಭಿಪ್ರಾಯ ವ್ಯಕ್ತಪಡಿಸಿದರು. ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಡಳಿತ ವತಿಯಿಂದ ಗುರುವಾರ ಆಯೋಜಿಸಲಾಗಿದ್ದ ಭಗವಾನ್ ಮಹಾವೀರರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು. ಅವರ ಸತ್ಯ ಮತ್ತು ಅಹಿಂಸೆಯ ತತ್ವಾದರ್ಶ, ಬೋಧನೆಗಳು ಇಂದಿನ ಸಮಕಾಲಿನ ಬದುಕಿನಲ್ಲಿ ನಾವೆಲ್ಲರೂ ರೂಢಿಸಿಕೊಳ್ಳಬೇಕು. ಪ್ರಸ್ತುತ ಜಗತ್ತು ತುಂಬಾ ಹಿಂಸಾತ್ಮಕ ದಾಳಿಯಲ್ಲಿ ನಡೆಯುತ್ತಿದೆ. ಈ ಹಿನ್ನೆಲೆಯಲ್ಲಿ ಮಹಾವೀರರ ಸಾರಿದ ಸತ್ಯ, ಅಹಿಂಸೆ, ತತ್ವಾದರ್ಶ, ಬೋ ಧನೆಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳುವುದರ ಜೊತೆಗೆ ಸಮಾಜದಲ್ಲಿ ಶಾಂತಿ, ಸುಭೀಕ್ಷತೆಯನ್ನು ಕಾಪಾಡಲು ಪ್ರಾಮಾಣಿಕವಾಗಿ ಪ್ರಯತ್ನಿಸೋಣ ಎಂದರು. ಈ ವೇಳೆ ಜಿ. ಪಂ. ಯೋಜನಾಧಿಕಾರಿ ಶಾರದ, ಕನ್ನಡ ಮತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ, ಸಂಘದ ಅಧ್ಯಕ್ಷರಾದ ನರೇಂದ್ರ ಕುಮಾರ್, ವಿನೋದ್ ಜೈನ್, ಪಾರ್ಶ್ವನಾಥ್ ಜೈನ್ ಮೂರ್ತಿ ಪೂಜಾರ್, ಮುಖೇಶ್ ಜೈನ್, ಮಂದಿರ ಟ್ರಸ್ಟಿಯಾದ ರಾಜು ಭಂಡಾರಿ, ದಿಗಂಬರ ಸಮಾಜದ ಮಹೇಂದ್ರ ಕುಮಾರ್, ಜಿನದತ್, ಚಂದ್ರಪ್ರಭು, ಸುದರ್ಶನ್ ಸೇರಿದಂತೆ ಮತ್ತಿತರರು ಇದ್ದರು.

ಪ್ರಮುಖ ಸುದ್ದಿ

# ಜಾಗ್ಥ ರಹೋ ಭಾರತ್ ಯಾತ್ರಾಗೆ ಧಮ್ಮ ಕೇಂದ್ರದಲ್ಲಿ ಸ್ವಾಗತ

» ಚಿತ್ರದುರ್ಗ

ಭಾರತದ ಅನೇಕ ಭಾಗಗಳಲ್ಲಿ ದಿನನಿತ್ಯವೂ ಒಂದಲ್ಲ ಒಂದು ರೀತಿಯ ಅಪರಾಧಗಳು ನಡೆಯುತ್ತಿವೆ. ಮಹಿಳೆಯರ ಮೇಲಿನ ದೌರ್ಜನ್ಯ, ಶೋಷಣೆ, ಕಿರುಕುಳ, ಅತ್ಯಾಚಾರದ ವಿರುದ್ಧ ಜನತೆಯಲ್ಲಿ ಜಾಗೃತಿ ಮೂಡಿಸುವುದಕ್ಕಾಗಿ ಜಾಗ್ಥ ರಹೋ ಭಾರತ್ ಯಾತ್ರಾ ಕೈಗೊಂಡಿರುವ ಯಾತ್ರಾರ್ಥಿಗಳಿಗೆ ಚಿತ್ರದುರ್ಗದ ಹೊರ ವಲಯದ ಧಮ್ಮ ಕೇಂದ್ರದಲ್ಲಿ ಸ್ವಾಗತಿಸಿ ಬರಮಾಡಿಕೊಳ್ಳಲಾಯಿತು.

ಜಾಗ್ಥ ರಹೋ ಭಾರತ್ ಯಾತ್ರಾ ಮುಖ್ಯಸ್ಥ ರಾಜೇಂದ್ರಕುಮಾರ್ ಮಾತನಾಡಿ ಮಾ. 8 ರಂದು ಮೌಂಟ್ ಅಬುವಿನಿಂದ ಹೊರಟರುವ ಯಾತ್ರೆ ಜೂ. 8 ಕ್ಕೆ ದೆಹಲಿ ತಲುಪಲಿದೆ. ಹರಿಯಾಣ, ಗಾಂಧಿಯನ್ ಸೊಸೈಟಿ ನವದೆಹಲಿ, ಇನ್ನರ್‌ವೀಲ್ಸ್ ಕ್ಲಬ್ ಮೌಂಟ್ ಅಬು ಇವುಗಳ ಸಂಯುಕ್ತಾಶ್ರಯದಲ್ಲಿ ಜಾಗ್ಥ ರಹೋ ಭಾರತ್ ಯಾತ್ರೆಯನ್ನು ಕೈಗೊಳ್ಳಲಾಗಿದ್ದು, ನೂರು ದಿನಗಳ ಈ ಯಾತ್ರೆ 21 ಸಾವಿರ ಕಿ.ಮೀ. ಸಂಚರಿಸಲಿದೆ. 21 ನೇ ಶತಮಾನದಲ್ಲಿದ್ದರೂ ಕೂಡ ಮಹಿಳೆಯರ ಮೇಲೆ ನಿರಂತರವಾಗಿ ದೌರ್ಜನ್ಯ, ಶೋಷಣೆ, ದಬ್ಬಾಳಿಕೆ, ಲೈಂಗಿಕ ಅತ್ಯಾಚಾರ ನಡೆಸುವ ಮೂಲಕ ಸ್ತ್ರೀಯನ್ನು ಅಭದ್ರತೆಯಲ್ಲಿ ಇಡಲಾಗಿರುವುದು ನಿಜಕ್ಕೂ ಸಮಾಜ ನಾಚಿಕೆಯಿಂದ ತಲೆ ತಗ್ಗಿಸಬೇಕಾಗಿದೆ. ಇಂತಹ ವಿಚಾರಗಳ ಬಗ್ಗೆ ಜಾಗೃತಿ ಮೂಡಿಸಲು ಭಾರತದ ಎಲ್ಲಾ ರಾಜ್ಯಗಳಲ್ಲೂ ಜಾಗ್ಥ ರಹೋ ಭಾರತ್ ಯಾತ್ರೆಯನ್ನು ಕೈಗೊಳ್ಳಲಾಗಿದೆ ಎಂದು ರಾಜೇಂದ್ರಕುಮಾರ್ ತಿಳಿಸಿದರು.



ಈಗಾಗಲೆ ದೇಶಾದ್ಯಂತ ಜಾಗೃತಿ ಕಾರ್ಯವನ್ನು ನಡೆಸಿಕೊಂಡು ಬರಲಾಗಿದ್ದು, ದೇಶದ ವಿವಿಧ ಸಂಘ ಸಂಸ್ಥೆಗಳು, ಎನ್.ಜಿ.ಓ.ಗಳು ವ್ಯಾಪಕವಾಗಿ ಸ್ವಾಗತ ನೀಡಿ ಬೆಂಬಲಿಸಿದ್ದು, ಜೂ.8 ರಂದು ದೆಹಲಿಯಲ್ಲಿ ನಡೆಯಲಿರುವ ಬೃಹತ್ ಸಮಾವೇಶದಲ್ಲಿ ಲಕ್ಷ ಲಕ್ಷ ಸಂಖ್ಯೆಯಲ್ಲಿ ಸಾರ್ವಜನಿಕರು ಪಾಲ್ಗೊಳ್ಳಲಿದ್ದಾರೆಂದು ಹೇಳಿದರು.

ಜಾಗ್ಥ ರಹೋ ಭಾರತ್ ಯಾತ್ರೆಯ ಉದ್ದಕ್ಕೂ ಝಾನ್ಸಿರಾಣಿ ಲಕ್ಷ್ಮಿಬಾಯಿ, ಜ್ಯೋತಿ ಬಾಪುಲೆ, ಕಿತ್ತೂರಾಣಿಚೆನ್ನಮ್ಮ, ಒನಕೆ ಓಬವ್ವ ಇವರುಗಳ ಹೆಸರುಗಳನ್ನು ನಿರಂತರವಾಗಿ ಸ್ಮರಣೆ ಮಾಡಲಾಗಿದ್ದು, ಮಹಿಳೆಯರು ಮತ್ತು ದೇಶದ ಪರ ಹೋರಾಡಿ ತ್ಯಾಗ, ಬಲಿದಾನಗೈದಿರುವವರಿಗೆ ನಮನಗಳನ್ನು ಸಲ್ಲಿಸಲಾಗಿದೆ ಎಂದು ನುಡಿದರು.

ಕರ್ನಾಟಕ ಶಾಂತಿ ಮತ್ತು ಸೌಹಾರ್ದ ವೇದಿಕೆ ಅಧ್ಯಕ್ಷ ನರೇನಹಳ್ಳಿ ಅರುಣ್‌ಕುಮಾರ್ ಮಾತನಾಡಿ ಜಾಗ್ಥ ರಹೋ ಭಾರತ ಯಾತ್ರೆಯಂತಹ ಜಾಗೃತಿ ಯಾತ್ರೆಗಳು ದೇಶದ ಬಗ್ಗೆ ಕಳಕಳಿ ಹೊಂದಿರುವಂತಹ ಜನರನ್ನು ಸದಾ ಎಚ್ಚರಿಸುತ್ತಿದೆ. ಹಾಗೆಯೆ ಮತ್ತಷ್ಟು ಕೆಲಸ ಮಾಡಲು ಹುರಿದುಂಬಿಸುತ್ತದೆ. ಭಾರತ ಯಾತ್ರೆಯಂತಹ ಜನಜಾಗೃತಿ ಯಾತ್ರೆಗಳು ದೇಶದಲ್ಲಿ ಹೆಚ್ಚು ಹೆಚ್ಚು ನಡೆಯಬೇಕಾದ ಅಗತ್ಯವಿದೆ. ಎಷ್ಟೆಲ್ಲಾ ಕಾನೂನು ಮತ್ತು ಸಂವಿಧಾನದ ಬಿಗಿ ಕಾವಲುಗಳಿದ್ದರು ಮಹಿಳೆಯರ ಮೇಲೆ ನಡೆಯುತ್ತಿರುವ ದೌರ್ಜನ್ಯಗಳು ನಿಜಕ್ಕೂ ಮನುಕುಲ ತಲೆತಗ್ಗಿಸುವಂತದ್ದು, ಇತ್ತೀಚೆಗೆ ಉತ್ತರಪ್ರದೇಶದಲ್ಲಿ ಹತ್ತೊಂಬತ್ತು ವರ್ಷದ ಬಾಲಕಿಯೋರ್ವಳ ಮೇಲೆ ಪೈಶಾಚಿಕ ಕೃತ್ಯವೆಸಗಿರುವ ಮಾನವ ರೂಪದ ನರ ರಾಕ್ಷಸರು ದೇಶದಲ್ಲಿ ಹೆಚ್ಚಳವಾಗಲು ಬೇರೆ ಬೇರೆ ಶಕ್ತಿಗಳ ಕೈವಾಡವಿದ್ದು, ಇಂತಹವರ ಕೃತ್ಯಗಳನ್ನು ನಿಯಂತ್ರಿಸಲು ಸಜ್ಜನರು

ಜಾಗೃತಿ ಜಾಥಾಗಳನ್ನು ನಡೆಸುವ ಮೂಲಕ ಮಹಿಳಾ ಸಮುದಾಯದಲ್ಲಿ ಜಾಗೃತಿ ಮೂಡಿಸಬೇಕಾಗಿದೆ ಎಂದರು.

ಬುದ್ಧ, ಬಸವ, ಅಂಬೇಡ್ಕರ್, ಗಾಂಧಿಯಂತಹ ಶಾಂತಿ ಸೌಹಾರ್ದತೆಯನ್ನು ಬೆಳೆಸಿ ಉಳಿಸಿದಂತಹ ಭಾರತದಲ್ಲಿ ಮಹಿಳೆಯರ ಮೇಲೆ ನಡೆಯುತ್ತಿರುವ ಕೃತ್ಯಗಳು ಮಾನವ ಸಮಾಜ ಅವಮಾನದಿಂದ ತಲೆ ತಗ್ಗಿಸಬೇಕಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಮಹಿಳೆಯರ ಶೋಷಣೆ ವಿರುದ್ಧ ರಾಜೇಂದ್ರಕುಮಾರ್, ಜಮುನಾಭಿ, ಜಲಂಧರ್‌ನಾಥ್, ವಿಕ್ರಂ ಇವರುಗಳ ನೇತೃತ್ವದಲ್ಲಿ ಭಾರತ ಯಾತ್ರೆ ಕೈಗೊಂಡಿರುವುದು ಪ್ರಸ್ತುತ ಸಂದರ್ಭದಲ್ಲಿ ಅನಿವಾರ್ಯ ಮತ್ತು ಸಂದರ್ಭೋಚಿತವಾಗಿದೆ ಎಂದರು.

ವಿಮುಕ್ತಿ ವಿದ್ಯಾಸಂಸ್ಥೆಯ ನಿರ್ದೇಶಕ ಆರ್.ವಿಶ್ವಸಾಗರ್ ಭಾರತ ಯಾತ್ರಿಗಳನ್ನು ಗೌರವಿಸಿ ಶಾಂತಿ ಯಾತ್ರೆಗಳಿಂದ ಸಮಾಜದಲ್ಲಿ ನೆಮ್ಮದಿ ಉಂಟಾಗುತ್ತದೆಂದು ಹೇಳಿದರು.

ಸ್ಪೀಚ್ ಸಂಸ್ಥೆಯ ಅಧ್ಯಕ್ಷರಾದ ಶೇಷಣ್ಣ ಮಾತನಾಡಿ ಯಾವುದೇ ಪ್ರತಿಫಲವಿಲ್ಲದೆ ಜಾಗ್ಥ ರಹೋ ಭಾರತ್ ಯಾತ್ರಾ ದೇಶಾದ್ಯಂತ ಸಂಚರಿಸುತ್ತಿರುವುದು ಶೋಷಣೆ, ದಬ್ಬಾಳಿಕೆ, ಅತ್ಯಾಚಾರಕ್ಕೆ ಒಳಗಾಗುತ್ತಿರುವ ಮಹಿಳೆಯರಲ್ಲಿ ಧೈರ್ಯ, ಆತ್ಮವಿಶ್ವಾಸ ತುಂಬಿದಂತಾಗಿದೆ. ಮಹಿಳೆಯರ ಮೇಲಾಗುವ ಶೋಷಣೆ ನಿಲ್ಲಬೇಕೆಂಬ ಉದ್ದೇಶದಿಂದ ಕೈಗೊಂಡಿರುವ ಯಾತ್ರೆ ಯಶಸ್ವಿಯಾಗಲಿ ಎಂದು ಹಾರೈಸಿದರು.

ವಿಮುಕ್ತಿ ವಿದ್ಯಾಸಂಸ್ಥೆ ಅಧ್ಯಕ್ಷೆ ಅನ್ನಪೂರ್ಣ, ಸಂಯೋಜಕಿ ನಾಗರತ್ನ, ಬೀಬಿಜಾನ್, ಅರಣ್ಯಸಾಗರ್ ಮತ್ತು ಸುತ್ತಮುತ್ತಲ ಗ್ರಾಮದ ಮೂವತ್ತಕ್ಕೂ ಹೆಚ್ಚು ಬಾಲಕಿಯರು ಈ ಸಂದರ್ಭದಲ್ಲಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಪಿಯು ಪರೀಕ್ಷೆ-2, 3ಕ್ಕೆ ನೋಂದಣಿಗೆ ಸೂಚನೆ: ಸಚಿವ ಮಧು ಬಂಗಾರಪ್ಪ

» ಬೆಂಗಳೂರು


ದ್ವಿತೀಯ ಪಿಯು ಪರೀಕ್ಷೆ–2 ಎಪ್ರಿಲ್ 24ರಿಂದ ಮೇ 8ರ ವರೆಗೆ, ಪರೀಕ್ಷೆ–3 ಜೂನ್ 9ರಿಂದ 21ರ ವರೆಗೆ ನಡೆಯಲಿದೆ. ವಿದ್ಯಾರ್ಥಿಗಳು ಶುಲ್ಕ ಪಾವತಿಸದೇ ಎ. 9ರಿಂದ ಎಪ್ರಿಲ್ 17ರ ಒಳಗಾಗಿ ಆಯಾ ಕಾಲೇಜುಗಳಲ್ಲಿ ಹೆಸರು ನೋಂದಾಯಿಸಿಕೊಂಡು ಪರೀಕ್ಷೆ ಬರೆಯಬಹುದು. ಅನುತ್ತೀರ್ಣರಾದ ಹಾಗೂ ಫಲಿತಾಂಶ ವೃದ್ಧಿಸಿಕೊಳ್ಳಲು ಬಯಸುವ ವಿದ್ಯಾರ್ಥಿಗಳಿಗೆ ಶುಲ್ಕ ಪಾವತಿಸದೆ ಎರಡನೇ ಮತ್ತು ಮೂರನೇ ಪರೀಕ್ಷೆ ಬರೆಯಲು ಅವಕಾಶ ಒದಗಿಸಲಾಗಿದೆ ಎಂದು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಬೇಸಗೆ ರಜೆಯಲ್ಲಿ ವಿಶೇಷ ತರಗತಿ: ಉಪನ್ಯಾಸಕರ ಸಂಘ ಆಕ್ಷೇಪ ಬೇಸಗೆ ರಜೆಯ ಅವಧಿಯಲ್ಲೇ ದ್ವಿತೀಯ ಪಿಯುಸಿ ಪರೀಕ್ಷೆ–2ಕ್ಕೆ ನೋಂದಣಿ ಯಾಗುವ ವಿದ್ಯಾರ್ಥಿಗಳಿಗೆ ವಿಶೇಷ ತರಗತಿ ನಡೆಸುವಂತೆ ಸೂಚಿಸಿರುವ ಶಾಲಾ ಶಿಕ್ಷಣ (ಪದವಿ ಪೂರ್ವ) ಇಲಾಖೆ ಕ್ರಮಕ್ಕೆ ಪಿಯು ಉಪನ್ಯಾಸಕರ ಸಂಘ ವಿರೋಧ ವ್ಯಕ್ತಪಡಿಸಿದೆ. ಸಂಘದ ಅಧ್ಯಕ್ಷ ಎ.ಎಚ್. ನಿಂಗೇಗೌಡ ಈ ಸಂಬಂಧ ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಿಗೆ ಪತ್ರ ಬರೆದಿದ್ದು, ಸುತ್ತೋಲೆಯನ್ನು ಹಿಂಪಡೆಯಬೇಕು. ಇಲ್ಲವೇ ಇಲಾಖೆಯನ್ನು ರಜೆ ರಹಿತ ಎಂದು ಘೋಷಿಸಬೇಕು ಎಂದು ಆಗ್ರಹಿಸಿದ್ದಾರೆ.

### ನಾಳೆ ಶ್ರೀ ವೀರಭದ್ರ ದೇವರ ಗುಗ್ಗುಳ

» ಚಿತ್ರದುರ್ಗ

ನಗರದಹೊಳಲ್ಕೆರೆರಸ್ತೆಯಶ್ರೀನೀಲಕಂಠೇಶ್ವರಸ್ವಾಮಿ ದೇವಸ್ಥಾನದಲ್ಲಿನ ವೀರಶೈವ ಸಮಾಜ (ರಿ.) ದವತಿಯಿಂದ ಏ.12ನೇ ಶನಿವಾರ ಬೆಳಗ್ಗೆ 6.30 ರಿಂದ ಹರಪನಹಳ್ಳಿ ಪಟ್ಟಣದ ಮೇಗಳಪೇಟೆ ಶ್ರೀ ಗುಗ್ಗುಳ ವೀರಭದ್ರೇಶ್ವರ ದೇವಸ್ಥಾನ ಸಮಿತಿ ಇವರಿಂದ ಶ್ರೀ ವೀರಭದ್ರ ದೇವರ ಗುಗ್ಗುಳ ಮತ್ತು ಅಗ್ನಿಕುಂಡ ಶ್ರೀ ನೀಲಕಂಠೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಏರ್ಪಡಿಸಲಾಗಿದೆ. ಬೆಳಗ್ಗೆ 7.00 ಗಂಟೆಗೆ ಗಂಗಾಪೂಜೆಯ ನಂತರ ಗುಗ್ಗುಳದ ಮೆರವಣಿಗೆಯು ಉಜ್ಜಯಿನಿ ಮಠದಿಂದ ಹೊರಟು ರಂಗಯ್ಯನಬಾಗಿಲು, ದೊಡ್ಡಪೇಟೆ, ಚಿಕ್ಕಪೇಟೆ, ಆನೆಬಾಗಿಲು, ಮಹಾತ್ಮಗಾಂಧಿ ವೃತ್ತದ ಮುಖಾಂತರವಾಗಿ ಶ್ರೀ ನೀಲಕಂಠೇಶ್ವರಸ್ವಾಮಿ ದೇವಸ್ಥಾನದ ಮುಂಭಾಗದ ಅಗ್ನಿಕುಂಡ ಹಾಯುವುದರ ಮೂಲಕ ಬಿಜಯಂಗ್ಯೆಯುವುದು. ಮಹಾಮಂಗಳಾರತಿ ನಂತರ ದಾಸೋಹ ಏರ್ಪಡಿಸಲಾಗಿದೆ. ಗುಗ್ಗುಳ ಮೆರವಣಿಗೆ ಬರುವ ದಾರಿಯಲ್ಲಿ ಬರುವಾಗ ಭಕ್ತರು ಮನೆಗಳ ಮುಂದೆ ನೀರನ್ನು ಹಾಕಿ ಸಹಕರಿಸಿ ಶ್ರೀ ವೀರಭದ್ರಸ್ವಾಮಿ ಮನೆ ದೇವರ ಮನೆತನದವರು, ಕಡ್ಡಾಯವಾಗಿ ಗುಗ್ಗುಳದಲ್ಲಿ ಭಾಗವಹಿಸಿ ಎಂದು ಸಮಾಜದವತಿಯಿಂದ ಮನವಿ ಮಾಡಲಾಗಿದ್ದು, ಈ ಕಾರ್ಯಕ್ರಮದಲ್ಲಿ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಶ್ರೀ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕಾಗಿ ವಿನಂತಿಸಲಾಗಿದೆ.

### ಟಿವಿಎಸ್ ಎಕ್ಸಲ್‌ಗೆ ಡಿಕ್ಕಿ ಹೊಡೆದ ಕೆಎಸ್‌ಆರ್‌ಟಿಸಿ ಬಸ್ ಸವಾರ ಸಾವು



» ಚಳ್ಳಕೆರೆ

ತಾಲ್ಲೂಕಿನ ಸಾಣೀಕೆರೆ ಗ್ರಾಮದ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಲಮರಹಳ್ಳಿಯಿಂದ ಚಳ್ಳಕೆರೆ ಕಡೆಗೆ ಟಿವಿಎಸ್ ಎಕ್ಸಲ್‌ನಲ್ಲಿ ಆಗಮಿಸುತ್ತಿದ್ದ ತರಕಾರಿ ವ್ಯಾಪಾರಿ ವೀರಭದ್ರಪ್ಪ(45) ಎಂಬುವವರಿಗೆ ಹಿರಿಯೂರು ಕಡೆಯಿಂದ ಚಳ್ಳಕೆರೆಗೆ ಬರುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ ಹಿಂಬದಿಯಿಂದ ಡಿಕ್ಕಿ ಹೊಡೆದ ಪರಿಣಾಮ ವೀರಭದ್ರಪ್ಪನವರ ತಲೆಗೆಪೆಟ್ಟು ಬಿದ್ದು ಸ್ಥಳದಲ್ಲೇ ಮೃತಪಟ್ಟಿರುತ್ತಾನೆ. ಮೃತನ ಪತ್ನಿ ಚಿತ್ತಮ್ಮ ಪೊಲೀಸರಿಗೆ ದೂರು ನೀಡಿ, ನನ್ನ ಗಂಡ ಸಾವಿಗೆ ಕಾರಣರಾದ ಕೆಎಸ್‌ಆರ್‌ಟಿಸಿ ಬಸ್ ಚಾಲಕನ ವಿರುದ್ದ ಕ್ರಮ ಕೈಗೊಳ್ಳುವಂತೆ ದೂರು ನೀಡಿದ್ದಾರೆ. ಪಿಎಸ್‌ಐ ಜೆ.ಶಿವರಾಜ್ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ಧಾರೆ.

### ಏ.15ರಂದು ಜಿಲ್ಲಾಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಉದ್ಘಾಟನೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ವತಿಯಿಂದ ಇದೇ ಏಪ್ರಿಲ್ 15ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ವೀರ ವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಚಿತ್ರದುರ್ಗ ಜಿಲ್ಲಾ ಮಟ್ಟದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ.

**ಕೃಷ್ಣಬೈರೇಗೌಡ ನಾಲಗೆ ತುದಿಯಲ್ಲಿ ಅಂಕಿ ಅಂಶ ಇಟ್ಟುಕೊಂಡಿರುವ ಸಮರ್ಥ ಮಂತ್ರಿ: ಸಿದ್ದರಾಮಯ್ಯ**

# ಕಂದಾಯ ಇಲಾಖೆ ಸರ್ಕಾರಕ್ಕೆ ಮಾತೃ ಇಲಾಖೆ

» ಬೆಂಗಳೂರು

ಕಂದಾಯ ಇಲಾಖೆ ಸರ್ಕಾರಕ್ಕೆ ಮಾತೃ ಇಲಾಖೆ ಇದ್ದಂತೆ. ಪೋಡಿಮುಕ್ತ ಗ್ರಾಮಗಳಾಗಬೇಕು. ಸರ್ವೇ ಕಾರ್ಯ ಪೂರ್ಣಗೊಳ್ಳಬೇಕು. ಪರವಾನಗಿ ಭೂಮಾಪಕರ ಕಾಯಂ ಮಾಡಲು ಗಂಭೀರ ಕ್ರಮದ ಜೊತೆಗೆ 36 ಂಆಐಖ ಗಳ ನೇಮಕ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಹತ್ವದ ಘೋಷಣೆ ಮಾಡಿದರು.

ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ನಡೆದ ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ಹಾಗೂ ಇಲಾಖೆಯ ನೌಕರರ ಸಂಘಗಳ 36ನೇ ರಾಷ್ಟ್ರೀಯ ಭೂಮಾಪನಾ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು.

ಕಂದಾಯ ಇಲಾಖೆ ಸರ್ಕಾರದ ಮಾತೃ ಇಲಾಖೆ ರೀತಿ ಇದೆ. ಈ ಇಲಾಖೆ ಅಚ್ಚುಕಟ್ಟಾಗಿ ಕೆಲಸ ಮಾಡಿದರೆ ರೈತ ಸಮುದಾಯ ನೆಮ್ಮದಿಯಾಗಿರುತ್ತದೆ. ಕೃಷ್ಣಬೈರೇಗೌಡರ ನೇತೃತ್ವದಲ್ಲಿ ಕಂದಾಯ ಇಲಾಖೆಯಲ್ಲಿಅತ್ಯುತ್ತಮಕೆಲಸಗಳಾಗುತ್ತಿವೆ ಎಂದು ಮೆಚ್ಚುಗೆ ಸೂಚಿಸಿದರು.

ಕೃಷ್ಣಬೈರೇಗೌಡರು ಇಲಾಖೆಯನ್ನು ಚೆನ್ನಾಗಿ ಅರ್ಥಮಾಡಿಕೊಂಡು, ನಾಲಗೆ ತುದಿಯಲ್ಲಿ ಅಂಕಿ ಅಂಶ ಇಟ್ಟುಕೊಂಡಿರುವ ಸಮರ್ಥ ಮಂತ್ರಿ.

ಕೇವಲ ಮಂತ್ರಿ ಆದರೆ ಸಾಲದು. ಪರಿಣತಿ, ಕಾಳಜಿ ಇರಬೇಕು. ಇವೆರಡೂ ಕೃಷ್ಣಬೈರೇಗೌಡ ಅವರಲ್ಲಿದೆ ಎಂದು ಸಿಎಂ ಮೆಚ್ಚುಗೆ ಸೂಚಿಸಿದರು.

ನಾನು ಎರಡು ಬಾರಿ ಮುಖ್ಯಮಂತ್ರಿ ಆಗಿ ಕಂದಾಯ ಇಲಾಖೆಯ, ನೌಕರರ



- **ಕೇವಲ ಮಂತ್ರಿ ಆದರೆ ಸಾಲದು, ಪರಿಣತಿ, ಕಾಳಜಿ ಇರಬೇಕು, ಇವೆರಡೂ ಕೃಷ್ಣ ಅವರಲ್ಲಿದೆ: ಸಿಎಂ**
- **ಪೋಡಿಮುಕ್ತ ಗ್ರಾಮಗಳಾಗಬೇಕು. ಸರ್ವೇ ಕಾರ್ಯ ಪೂರ್ಣಗೊಳ್ಳಬೇಕು: ಸಿ.ಎಂ ಕರೆ**
- **ಪರವಾನಗಿ ಭೂಮಾಪಕರ ಕಾಯಂ ಮಾಡಲು ಗಂಭೀರ ಕ್ರಮದ ಜೊತೆಗೆ 36 ಂಆಐಖ ಗಳ ನೇಮಕ ಮಾಡಲಾಗುವುದು: ಸಿ.ಎಂ ಸಿದ್ದರಾಮಯ್ಯ ಮಹತ್ವದ ಘೋಷಣೆ**
- **ಕೆರೆ-ಕಟ್ಟೆ ಒತ್ತುವರಿ ತೆರವುಗೊಳಿಸಿ: ಸಿ.ಎಂ ಸ್ಪಷ್ಟ ಸೂಚನೆ**
- **ಒಂದೂವರೆ ವರ್ಷದಲ್ಲಿ 26 ಲಕ್ಷ ಸರ್ವೇ ಕಾರ್ಯ ಯಶಸ್ವಿಯಾಗಿ ಪೂರ್ಣಗೊಂಡಿದ್ದಕ್ಕೆ ಸಚಿವರಿಗೆ ಅಭಿನಂದಿಸಿದ ಸಿಎಂ**

ಬಹಳಷ್ಟು ಸಮಸ್ಯೆಗಳನ್ನು ಬಗೆಹರಿಸಿದ್ದೇನೆ. ಪೂರ್ತಿ ಸಮಸ್ಯೆ ಬಗೆಹರಿದಿಲ್ಲ ಎನ್ನುವ ಬೇಸರ ನನಗೂ ಇದೆ.

ತಹಶೀಲ್ದಾರ್, ಎಸಿ ಕಚೇರಿಗಳಲ್ಲಿ ಸುಗಮವಾಗಿ, ಪ್ರಾಮಾಣಿಕವಾಗಿ ಕೆಲಸಗಳು ಆದರೆ ನಾಡಿನ ಜನತೆ, ರೈತ ಸಮುದಾಯ ಅತ್ಯಂತ ನೆಮ್ಮದಿಯಾಗಿರುತ್ತದೆ ಎಂದರು.

ಕಂದಾಯ ಇಲಾಖೆಗೆ ಅಗತ್ಯ ಇರುವಷ್ಟು ಹಣ ಕೊಟ್ಟಿದ್ದೇವೆ, ಮುಂದೆಯೂ ಕೊಡುತ್ತೇವೆ. ಅಗತ್ಯ ಸಿಬ್ಬಂದಿ ಬಲವನ್ನೂ ಕೊಟ್ಟಿದ್ದೇವೆ. ಅಗತ್ಯ ಇದ್ದರೆ ಮತ್ತೂ ಕೊಡುತ್ತೇನೆ. ಖಾಲಿ ಇರುವ ಎಲ್ಲಾ ಸರ್ವೇಯರ್‌ಹುದ್ದೆಗಳನೇಮಕಾತಿಅತ್ಯಂತ ಪಾರದರ್ಶಕವಾಗಿ ಆಗಿದೆ. ಸದ್ಯದಲ್ಲೇ ನೇಮಕಾತಿ ಪತ್ರವನ್ನೂ ಕೊಡುತ್ತೇವೆ ಎಂದರು. ಹಿಂದೆ ಗೋವಿಂದೇಗೌಡರು ಪ್ರಾಮಾಣಿಕವಾಗಿ ಒಂದು ಲಕ್ಷ ಶಿಕ್ಷಕರ ನೇಮಕಾತಿ ಆಗಿರುವ ರೀತಿಯಲ್ಲೇ ಕೃಷ್ಣಬೈರೇಗೌಡರು ಸರ್ವೇಯರ್ ಗಳ ನೇಮಕಾತಿ ಮಾಡಿದ್ದಾರೆ.

ಪರವಾನಗಿ ಭೂಮಾಪಕರ ಕಾಯಂ ಮಾಡಲು ಗಂಭೀರ ಚಿಂತನೆ ಮಾಡಲಾಗುವುದು. ಜೊತೆಗೆ 36 ಮಂದಿ ಎಡಿಎಲ್ ಆರ್ ಗಳ ನೇಮಕವನ್ನೂ ಸದ್ಯದಲ್ಲೇ ಮಾಡಲಾಗುವುದು ಎಂದು ಘೋಷಿಸಿದರು.

ನಮ್ಮದು ಹಳ್ಳಿಗಳ ಮತ್ತು ರೈತರ ದೇಶ. ಗ್ರಾಮಗಳು ಮತ್ತು ರೈತರು ನೆಮ್ಮದಿಯಾಗಿ ಉತ್ಪಾದನೆಯಲ್ಲಿತೊಡಗಬೇಕಾದರೆಸರ್ವೇ ಕಾರ್ಯ ಸರಿಯಾಗಿ ಪೂರ್ಣಗೊಳ್ಳಬೇಕು. ಕೆರೆ ಕಟ್ಟೆಗಳ ಒತ್ತುವರಿ ತೆರವುಗೊಳಿಸಬೇಕು, ಪೋಡಿ ಮುಕ್ತ ಗ್ರಾಮಗಳಾಗಬೇಕು. ಇದಕ್ಕಾಗಿ ಇಲಾಖೆಯ ಪ್ರತಿಯೊಬ್ಬರೂ ಪ್ರಾಮಾಣಿಕವಾಗಿ ಶ್ರಮಿಸಿ, ಧ್ವನಿ ಇಲ್ಲದವರ ಪರವಾಗಿ ಕೆಲಸ ಮಾಡುವುದೇ ನಿಜವಾದ ಪುಣ್ಯದ ಕಾರ್ಯ ಎಂದು ಕರೆ ನೀಡಿದರು.

ಪ್ರತೀ ವರ್ಷ ರಾಷ್ಟ್ರೀಯ ಭೂಮಾಪನ ದಿನಾಚರಣೆಯನ್ನು ಪ್ರತೀ ವರ್ಷ ಆಚರಿಸಬೇಕು ಎಂದು ಸೂಚಿಸಿದರು.

ಶಾಸಕರಿಜ್ವಾನ್‌ಅರ್ಷದ್‌ಅವರುಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಸಚಿವರಾದ ಕೃಷ್ಣಬೈರೇಗೌಡ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಮುಖ್ಯ ಸಚೇತಕ ಅಶೋಕ್ ಪಟ್ಟಣ್ ಸೇರಿದಂತೆ ಹಲವು ಪ್ರಮುಖರು ಉಪಸ್ಥಿತರಿದ್ದರು.

**ಹುರುಳಿಲ್ಲದ ವಿಷಯಕ್ಕೆ ವಿಷ ತುಂಬುವ ಪ್ರಯತ್ನ – ಸಿಎಂ**

## ಗಣಿ ಗುತ್ತಿಗೆ ನವೀಕರಣ: ಗೊಂದಲ ಸೃಷ್ಟಿಸುವ ಯತ್ನ

» ಬೆಂಗಳೂರು

ಗಣಿ ಗುತ್ತಿಗೆ ನವೀಕರಣದ ವಿಚಾರಕ್ಕೆ ಸಂಬಂಧಿಸಿದಂತೆ ಹಲವು ಗೊಂದಲಗಳನ್ನು ಸೃಷ್ಟಿಸುವಪ್ರಯತ್ನನಡೆದಿದೆಎಂದುಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದ್ದಾರೆ.

ಇಂತಹ ಅಪ ಪ್ರಚಾರಗಳು ನಾನು ಅಧಿಕಾರಕ್ಕೆ ಬಂದಾಗಿನಿಂದಲೂ ನಡೆದುಕೊಂಡು ಬರುತ್ತಿದೆ. ಕೆಲವು ದುಷ್ಟಶಕ್ತಿಗಳು ರಾಜಭವನವನ್ನು ತಪ್ಪು ದಾರಿಗೆಳೆಯುವ ಕೆಲಸವನ್ನು ನಿರಂತರವಾಗಿ ಮಾಡುತ್ತಿವೆ ಎಂದು ಮುಖ್ಯಮಂತ್ರಿಯವರು ತಿಳಿಸಿದ್ದಾರೆ.

ಇಂದು ಮಾಧ್ಯಮಗಳಲ್ಲಿ ಪ್ರಕಟಗೊಂಡ 8 ಗಣಿ ಕಂಪೆನಿಗಳ ಕುರಿತಾಗಿ ಪ್ರಕಟಗೊಂಡ ಸುದ್ದಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳ ಪತ್ರಿಕಾ ಹೇಳಿಕೆ ವಿವರ ಹೀಗಿದೆ.

2015 ಕ್ಕಿಂತ ಮೊದಲು ಅಸ್ತಿತ್ವದಲ್ಲಿದ್ದ ಎಂಎಂಡಿಆರ್–1957 ಕಾಯ್ದೆಯಲ್ಲಿ ನವೀಕರಣವು 20 ವರ್ಷಗಳ ಅವಧಿಗೆ ಅನ್ವಯವಾಗುತ್ತಿತ್ತು. ಅದರ ಪ್ರಕಾರ ಸರ್ಕಾರವು "ಗಣಿ ಗುತ್ತಿಗೆಯ ನವೀಕರಣಕ್ಕೆ ಫಾರೆಸ್ಟ್ ಕ್ಲಿಯರೆನ್ಸ್‌ನ್ನು ಪಡೆದುಕೊಳ್ಳುವ ಸಲುವಾಗಿ ಮಾತ್ರ ಷರತ್ತುಬದ್ಧ ತಾತ್ವಿಕ ಅನುಮೋದನೆ ನೀಡಲಾಗಿದೆ."

ದಿನಾಂಕ: 12.01.2015 ರಂದು ಕೇಂದ್ರ ಸರ್ಕಾರವು ಎಂಎಂಡಿಆರ್ ಕಾಯ್ದೆಗೆ ಸುಗ್ರೀವಾಜ್ಞೆ ಮೂಲಕ ತಿದ್ದುಪಡಿಯನ್ನು ತಂದ ಕಾರಣ ವಿವಿಧ ಹಂತದ ಪರಿಶೀಲನೆಗಳನ್ನು ನಡೆಸಿ, ದಿನಾಂಕ: 09.02.2015 ರಂದು ಗಣಿ ಗುತ್ತಿಗೆ ನವೀಕರಣಕ್ಕಾಗಿ ನೀಡಿದ್ದ ಷರತ್ತುಬದ್ಧ 8 ಕಂಪನಿಗಳ ತಾತ್ವಿಕ ಅನುಮತಿ ಪತ್ರಗಳು ಊರ್ಜಿತವಲ್ಲ ಎಂದು ತೀರ್ಮಾನಿಸಿ ಅವುಗಳನ್ನುರದ್ದುಪಡಿಸಿ ತಿದ್ದುಪಡಿ ಕಾಯ್ದೆಯಂತೆ ಕ್ರಮವಹಿಸಲು ಸೂಚಿಸಲಾಯಿತು.



ನಂತರ, ಗಣಿ ಇಲಾಖೆಯು ಸಲ್ಲಿಸಿದ ಡೀಮ್ಡ್ ಅವಧಿ ವಿಸ್ತರಣೆ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ ರಾಜ್ಯ ಸರ್ಕಾರವು ಒಂದು ಪ್ರಕರಣವನ್ನು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಡೀಮ್ಡ್ ಅವಧಿ ವಿಸ್ತರಣೆಗೆ ಪರಿಗಣಿಸದೆ ರದ್ದುಪಡಿಸಲಾಗಿದೆ. ಉಳಿದ 7 ಪ್ರಕರಣಗಳಿಗೆ ಶಾಸನಬದ್ಧವಾದ ಅರಣ್ಯ, ಪರಿಸರ ಮುಂತಾದ ತೀರುವಳಿ ಪತ್ರಗಳನ್ನು ಹಾಜರುಪಡಿಸುವ, ಬೇಬಾಕಿ ಪತ್ರ ಸಲ್ಲಿಸುವ ಹಾಗೂ ಸಿಬಿಐ, ಎಸ್‌ಐಟಿ ಸೇರಿದಂತೆ ವಿವಿಧ ಸಂಸ್ಥೆಗಳ ತನಿಖೆಯ ಅಂತಿಮ ವರದಿಯನ್ನು ಆಧರಿಸಿ ಸರ್ಕಾರದ ಕ್ರಮಕ್ಕೆ ಬದ್ಧರಾಗಲು ಷರತ್ತು ವಿಧಿಸಿ ಡೀಮ್ಡ್ ಅವಧಿ ವಿಸ್ತರಣೆ ಪತ್ರ ನೀಡಲಾಗಿದೆ.

ಆದರೆ, ಈ 7 ಕಂಪನಿಗಳ ಪೈಕಿ 2 ಕಂಪನಿಗಳು ಶಾಸನಬದ್ಧವಾದ ತೀರುವಳಿಗಳನ್ನು ಸಲ್ಲಿಸದ ಕಾರಣ, ಯಾವುದೇ ಗಣಿಗಾರಿಕೆ ಹಕ್ಕುಗಳನ್ನು ನೀಡಿರುವುದಿಲ್ಲ. ಉಳಿದ 5 ಪ್ರಕರಣಗಳಲ್ಲಿ 3 ಪ್ರಕರಣಗಳನ್ನು ಬಿಜೆಪಿ ಆಡಳಿತದ ಅವಧಿಯಲ್ಲಿ ಅಂದರೆ 2020 ಹಾಗೂ 2021 ರಲ್ಲಿ ಗಣಿ ಗುತ್ತಿಗೆ ಹಕ್ಕನ್ನು ನೀಡಲಾಗಿದೆ. ಉಳಿದ ಎರಡು ಪ್ರಕರಣಗಳನ್ನು 2016 ಮತ್ತು 2018 ರಲ್ಲಿ ಪೂರಕ ಕರಾರು ಪತ್ರದ ಮುಖಾಂತರ ಷರತ್ತುಬದ್ಧ ಡೀಮ್ಡ್ ವಿಸ್ತರಣೆಯ ಗಣಿ ಗುತ್ತಿಗೆ ಹಕ್ಕನ್ನು ನೀಡಲಾಗಿದೆ.

ಹಾಗಾಗಿ, ಈ ಎಲ್ಲಾ 8 ಪ್ರಕರಣಗಳಲ್ಲಿ ಸರ್ಕಾರಕ್ಕೆ ನಯಾಪೈಸೆಯಷ್ಟೂ ನಷ್ಟವಾಗಲಿಲ್ಲ. ಈ ಅವಧಿಯಲ್ಲಿ ಒಂದು ಹಿಡಿಯಷ್ಟೂ ಅದಿರು ತೆಗೆದಿಲ್ಲ.

ಈ ಕುರಿತಂತೆ ಈ ಹಿಂದೆ ಕೂಡ ವಿರೋಧ ಪಕ್ಷಗಳವರು ಹಾಗೂ ಕೆಲವು ವ್ಯಕ್ತಿಗಳು ಹಲವು ಸಂಸ್ಥೆಗಳಲ್ಲಿ ಪ್ರಕರಣಗಳನ್ನು ದಾಖಲಿಸಿದ್ದರು. ಈ ದೂರುಗಳಲ್ಲಿ ಯಾವುದೇ ಹುರುಳಿಲ್ಲವೆಂದು ದೂರುಗಳನ್ನು ಮುಕ್ತಾಯಗೊಳಿಸಲಾಗಿದೆ.

ವಿರೋಧ ಪಕ್ಷಗಳವರು ಸದರಿ ವಿಚಾರವನ್ನು ಸದನದಲ್ಲೂ ಪ್ರಶ್ನಿಸಿದ್ದರು. ಈಗಿನ ಕೇಂದ್ರದ ಭಾರಿ ಕೈಗಾರಿಕೆ ಮತ್ತು ಉಕ್ಕು ಮಂತ್ರಿಯಾಗಿರುವ ಕುಮಾರಸ್ವಾಮಿಯವರು ದಿನಾಂಕ: 14.01.2018 ರಂದು ಪತ್ರಿಕಾ ಗೋಷ್ಠಿಯನ್ನೂ ಮಾಡಿದರು.

ಆದರೆ, ಈ ಯಾವುದೇ ಪ್ರಕರಣಗಳಲ್ಲಿ ಹುರುಳೆ ಇರಲಿಲ್ಲ. ಏಕೆಂದರೆ, ಈ ಎಲ್ಲಾ 8 ಪ್ರಕರಣಗಳನ್ನು ಹೊಸ ಸುಗ್ರೀವಾಜ್ಞೆಯ ನಿಯಮಾವಳಿಗಳಿಗೆ ಅನುಗುಣವಾಗಿ ಕ್ರಮವಹಿಸಲಾಗಿದೆ. ಅವಧಿ ಮುಗಿದ ಗಣಿ ಗುತ್ತಿಗೆಗಳನ್ನು ನಂತರ ನಿಯಮಾನುಸಾರ ಹರಾಜಿಗೆ ಒಳಪಡಿಸಿ ವಿಲೇ ಮಾಡಲಾಗಿದೆ.

ಸುಮಾರು 10 ವರ್ಷಗಳ ನಂತರ ಈ ಪ್ರಕರಣವನ್ನು ರಾಜಕೀಯ ದುರುದ್ದೇಶದಿಂದ ಜಗಿಯಲು ಪ್ರಾರಂಭಿಸಿದ್ದಾರೆ.

ಹುರುಳಿಲ್ಲದ ವಿಷಯಕ್ಕೆ ವಿಷ ತುಂಬಿ ನಾಡಿನ ಜನರ ಮೆದುಳನ್ನು ಕಲುಷಿತಗೊಳಿಸಲು ಹೊರಟಿರುವ ದುಷ್ಟ ರಾಜಕೀಯ ಪಿತೂರಿಗಳನ್ನು ನಾಡಿನ ಪ್ರಜ್ಞಾವಂತ ಜನ ನಂಬಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮನವಿ ಮಾಡಿದ್ದಾರೆ.

## ನಂದಿನಿ ಇಡ್ಲಿ-ದೋಸೆ ಹಿಟ್ಟಿಗೆ ಭಾರೀ ಬೇಡಿಕೆ: ಪೂರೈಸಲು KMF ವಿಫಲ

» ಬೆಂಗಳೂರು




ವೇ ಪ್ರೋಟೀನ್ ಆಧಾರಿತ ಉತ್ಕೃಷ್ಟ ಗುಣಮಟ್ಟದ ನಂದಿನಿ ಇಡ್ಲಿ ಹಾಗೂ ದೋಸೆ ಹಿಟ್ಟನ್ನು ಗ್ರಾಹಕರು ಖುಷಿಯಿಂದ ಮುಗಿಬಿದ್ದು ಖರೀದಿಸುತ್ತಿದ್ದರು. ಆದರೆ ಇದೀಗ ಇಡ್ಲಿ ಮತ್ತು ದೋಸೆ ಇಟ್ಟಿಗೆ ಭಾರೀ ಬೇಡಿಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕೆಎಂಎಫ್ ಅನಿಯಮಿತವಾಗಿ ಪೂರೈಸುತ್ತಿದೆ.ಅನೇಕ ನಂದಿನಿ ಪಾರ್ಲರ್‌ಗಳ ಸಿಬ್ಬಂದಿ ಪದೇ ಪದೇ ವಿನಂತಿ ಮಾಡಿದರೂ ಹಿಟ್ಟಿನ ಸ್ಟಾಕ್ ನಿರಂತರವಾಗಿ ಪೂರೈಕೆ ಮಾಡಲಾಗುತ್ತಿಲ್ಲ ಎಂಬ ಆರೋಪ ಕೇಳಿ ಬಂದಿದೆ. ಹಿಟ್ಟನ್ನು ಮಾರುಕಟ್ಟೆ ಬಿಡುಗಡೆ ಮಾಡಿದ್ದ ಕೆಎಂಎಫ್ ಸಂಕ್ರಾಂತಿಯ ನಂತರ ಬೇಡಿಕೆಯ ಆಧಾರದ ಮೇಲೆ ಪೂರೈಕೆಯನ್ನು ಸುವ್ಯವಸ್ಥಿತಗೊಳಿಸಲಾಗುವುದು ಎಂದು ಹೇಳಿಕೊಂಡಿತ್ತು. ಆದಾಗ್ಯೂ, ಮೂರು ತಿಂಗಳ ನಂತರವೂ ಬ್ಯಾಟರ್‌ನ ಸ್ಥಿರ ಹರಿವು ಇಲ್ಲ ಎಂದು ನಂದಿನಿ ಮಾರಾಟಗಾರರೊಬ್ಬರು ಹೇಳಿದರು.ನಗರ ಗ್ರಾಹಕರು, ವಿಶೇಷವಾಗಿ ಟೈಟ್ ಶೆಡ್ಯೂಲ್ ನಲ್ಲಿ ಕೆಲಸ ಮಾಡುವ ವೃತ್ತಿಪರರು, ಹೆಚ್ಚಾಗಿ ರೆಡಿ–ಟು–ಕುಕ್ ಊಟದ ಆಯ್ಕೆಗಳತ್ತ ಮುಖ ಮಾಡುತ್ತಿರುವುದರಿಂದ, ಪ್ರೋಟೀನ್–ಪ್ಯಾಕ್ಡ್ ಉಪಹಾರ ಆಯ್ಕೆಯು ನಂದಿನಿಯ ಬೆಸ್ಟ್ ಸೆಲ್ಲರ್‌ಗಳಲ್ಲಿ ಒಂದಾಗುವ ನಿರೀಕ್ಷೆಯಿತ್ತು. ಆದರೆ ಕಂಪನಿಯು ಬೇಡಿಕೆಯನ್ನು ಉಳಿಸಿಕೊಳ್ಳಲು ವಿಫಲವಾಗಿದೆ ಎಂದು ಗ್ರಾಹಕರು ಬೇಸರ ವ್ಯಕ್ತ ಪಡಿಸಿದ್ದಾರೆ,ಆದರೆ ಪ್ರತಿಸ್ಪರ್ಧಿ ಬ್ರ್ಯಾಂಡ್ ನ ಇಡ್ಲಿ–ದೋಸೆ ಬ್ಯಾಟರ್ ಗಳು ಮಾರುಕಟ್ಟೆಯಲ್ಲಿ ಸ್ಥಾನ ಪಡೆಯುತ್ತಿವೆ, ಸಮಯವನ್ನು ಸದುಪಯೋಗ ಪಡಿಸಿಕೊಂಡ ಕಂಪನಿಗಳು ರಾಗಿ–ಆಧಾರಿತ ಬ್ಯಾಟರ್ ಮತ್ತು ಇತರ ಪ್ರೋಟೀನ್–ಭರಿತ ಹೊಸ ರೂಪಾಂತರಗಳನ್ನು ಪರಿಚಯಿಸುವ ಮೂಲಕ ಪ್ರಸಿದ್ಧವಾಗುತ್ತಿವೆ.ವೇ ಪ್ರೋಟೀನ್ ಭರಿತ ಬ್ಯಾಟರ್ ಅನುಕೂಲಕರ ಮತ್ತು ಆರೋಗ್ಯಕರ ಆಯ್ಕೆಯಂತೆ ಕಾಣುತ್ತಿದ್ದರಿಂದ ನಾವು ಅದನ್ನು ಖರೀದಿಸಲು ಉತ್ಸುಕರಾಗಿದ್ದೆವು. ನಾವು ಅದನ್ನು ಒಮ್ಮೆ ಖರೀದಿಸುವಲ್ಲಿ ಯಶಸ್ವಿಯಾಗಿದ್ದೇವೆ, ಆದರೆ ನಂತರ ಅದು ಮತ್ತೆ ಎಂದಿಗೂ ಮತ್ತೆ ಸಿಗಲಿಲ್ಲ ಎಂದು ಆರ್‌ಟಿ ನಗರದ ನಿವಾಸಿ ಜಾನಕಿ ಹೇಳಿದರು. ಹಾಲೊಡಕು ಆಧಾರಿತ ಇಡ್ಲಿ ಮತ್ತು ದೋಸೆ ಬ್ಯಾಟರ್ ಅನ್ನು ಡಿ. 25 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಡುಗಡೆ ಮಾಡಿದರು.

**ಪ್ರಮುಖ ಸುದ್ದಿ**

# ಸಮಾಜದಲ್ಲಿ ಸಂಘಟಿತರಾಗುವುದು ಬಹು ಮುಖ್ಯ

» ಹೊಸದುರ್ಗ

ಯಾವುದೇ ಸಮಾಜವಿರಲಿ ಅಸಂಘಟಿತರಾಗದೆ ಸಂಘಟಿತರಾಗುವುದು ಬಹು ಮುಖ್ಯ ಸಮಾಜದಲ್ಲಿ ಪ್ರತಿಯೊಬ್ಬರೂ ಸಹಾ ಸಂಘಟಿತರಾದರೆ ಮಾತ್ರ ಸಮಾಜದ ಬೆಳೆಯಲು ಸಾಧ್ಯ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಕರೆ ನೀಡಿದರು.

ಪಟ್ಟಣದ ಜೈನ ಮಂದಿರದದಲ್ಲಿ ಗುರುವಾರ ಅಯೋಜಿಸಲಾಗಿದ್ದ ಭಗವಾನ್ ಶ್ರೀ ಮಹಾವೀರ ಸ್ವಾಮಿಯವರ 2624 ನೇ ಜನ್ಮಕಲ್ಯಾಣ ಜಯಂತಿ ಮಹೋತ್ಸವ ಹಾಗೂ ಶಾಸಕರಿಗೆ ಸನ್ಮಾನ ಸಮಾರಂಭ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಜೈನ ಸಮಾಜ ಅತ್ಯಂತ ಚಿಕ್ಕ ಸಮಾಜ, ಚಿಕ್ಕ ಸಮಾಜವಾದರೂ ಸಹಾ ಚೋಕ್ಕವಾಗಿದೆ ಈ ಸಮಾಜದಲ್ಲಿ ಎಲ್ಲರೂ ಸಹಾ ಸಂಘಟಿತರಾಗಿ ಸಹ ಬಾಳ್ವೆಯನ್ನ ನಡೆಸುತ್ತಿದ್ದಾರೆ ಈ ಸಮಾಜಕ್ಕೆಮಾಜಿ ಶಾಸಕ ಇಳ್ಕಲ್‌ವಿಜಯಕುಮಾರ್‌ಅವರಕೋಡುಗೆ ಸಾಕಷ್ಟು ಇದೆ ಸಣ್ಣ ಸಮನಜವದರೂ ಸಹ ಅಂದು ಜೈನ ಸಮಾಜದವರಾದ ಇಳ್ಕಲ್‌ವಿಜಯಕುಮಾರ್ ಅವರು ಈ ಹಿಂದೆ ವಿಧಾನ ಸಭೆಗೆ ಆಯ್ಕೆಯಾಗಿ ಶಾಸಕರಾಗಿದ್ದು ನಿಜಕ್ಕೂ ಹೆಮ್ಮೆಯ ವಿಷಯ ಎಂದು ತಿಳಿಸಿದ ಅವರು ಈ ಸಮಾಜದಲ್ಲಿ ಸಾಕಷ್ಟು ಮಂದಿ ಸಮಾಜದ ಅಭಿವೃದ್ಧಿಗಾಗಿ ಶ್ರಮಿಸುತ್ತಿದ್ದಾರೆ ಈ ಸಮಾಜಕ್ಕೆ ನನ್ನ ಸಹಕಾರ ಸದಾ ಇದ್ದೇ ಇರುತ್ತದೆ ಎಂಬ ಭರವಸೆಯನ್ನ ನೀಡಿದರು.




ಜೈನ ಸಮಾಜದ ಮುಖಂಡ ಹಾಗೂ ಉಪನ್ಯಾಸಕ ಹೆಚ್.ಪಿ.ಸುಮತಿಕುಮಾರ್ ಮಾತನಾಡಿ ನಮ್ಮ ಸಮಾಜಕ್ಕೆ ಒಂದು ಜೈನ ನಿಗಮ ಮಂಡಳಿಯನ್ನ ಸ್ಥಾಪಿಸುವುದಕ್ಕೆ ಶಾಸಕರು ಸರ್ಕಾರದ ಗಮನ ಸೆಳೆದು ನಿಗಮ ಮಂಡಳಿ ಸ್ಥಾಪನೆಗೆ ಸರ್ಕಾರವನ್ನ ಒತ್ತಾಯಿಸ ಬೇಕು ಎಂದು ಮನವಿ ಮಾಡಿದರು.

ತಾಲೂಕು ಜೈನ ಸಮಾಜದ ಅಧ್ಯಕ್ಷ ಹೆಚ್.ಡಿ.ಆದಿರಾಜಯ್ಯ ಅಧ್ಯಕ್ಷತೆ ವಹಿಸಿದ್ದರು.ಸಮಾಜದ ಮುಖಂಡರು ಗಳಾದ ಇ.ಟಿ.ಭರತ್‌ರಾಜ್, ಹೆಚ್.ಪಿ. ಸುರೇಶ್‌ಜೈನ್, ಹೆಚ್.ಬಿ.ಬ್ರಹ್ಮಪಾಲ್ ಇ.ವಿ.ಅಜ್ಜಪ್ಪ, ಹೆಚ್.ಬಿ.ಧನಪಾಲ್, ಹೆಚ್.ವಿ.ಬಾಹುಬಲಿ, ಇ.ವಿ.ವರ್ಧಮಾನ್, ಹೆಚ್.ಪಿ. ಸುಮತಿಕುಮಾರ್, ಇ.ವಿ.ಶೀಥಲ್‌ಕುಮರ್, ಅನುಷ್‌ಕುಮಾರ್ ಜೈನ್, ಪೌರಡಳಿತ ಸಚಿವರ ಆಪ್ತಸಲಹೆಗಾರ ಫಯಾಜ್, ಕಾಂಗ್ರೇಸ್ ಮುಖಂಡರುಗಳಾದ ಅಗ್ರೋ ಹೆಚ್.ಶಿವಣ್ಣ,ದೀಪಿಕಸತೀಶ್ ಸೇರಿದಂತೆ ಜೈನ ಸಮಾಜದ ಶ್ರಾವಕ ಶ್ರಾವಕಿಯರು ಭಾಗವಹಿಸಿದ್ದರು. ಇದೇ ಕಾರ್ಯಕ್ರಮದಲ್ಲಿ ಶಾಸಕ ಬಿ.ಜಿ.ಗೋವಿಂದಪ್ಪ ಅವರನ್ನ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮಕ್ಕೂ ಮುನ್ನ ಬೆಳಿಗ್ಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜೈನ ಸಂದೇಶವನ್ನ ಸಾರುತ್ತಾ ಭಗವಾನ್ ಮಹಾವೀರರ ಮೆರವಣಿಗೆ ಮಾಡಲಾಯಿತು.



# ಪ್ರೀತಿ ಎಂಬ ಭಾವ ಹುಡುಕುತ್ತಾ, ಪ್ರೀತಿಯ ಮಾಯೆಯೊಳಗೆ



ಪ್ರೀತಿ ಪ್ರೀತಿಯಾಗಿಯೇ ಇದ್ದಾಗ ಅದೇ ನಿಜವಾದ ಭಾವ ಮತ್ತು ಮೌಲ್ಯ, ಪ್ರೀತಿ ಪ್ರೀತಿಯಂತೆ ಆದಾಗ ಅದೇ ವ್ಯಾಪಾರೀಕರಣ, ಪ್ರೀತಿ ತೋರ್ಪಡಿಕೆಯಾದಾಗ ಅಥವಾ ಪ್ರದರ್ಶನವಾದಾಗ ಅದೇ ಆತ್ಮವಂಚನೆ ( Hypocrisy ).

ಪ್ರೀತಿ ಕೃತಕವಾದಾಗ ಅದೇ ಮೌಲ್ಯಗಳ ಅಧಃಪತನ......

ಇದು ಸ್ನೇಹ - ವಿಶ್ವಾಸ - ಭಕ್ತಿ - ಶ್ರಮ - ಶ್ರದ್ಧೆ - ಕರುಣೆ - ಕ್ಷಮೆ -

ತ್ಯಾಗ - ಪ್ರಾಮಾಣಿಕತೆಗಳಿಗಷ್ಟೇ ಅಲ್ಲ ಮನುಷ್ಯ ಸಂಬಂಧಗಳಿಗೂ ಅನ್ವಯಿಸುತ್ತದೆ.

ತಾಯಿ ತಂದೆ ಅಣ್ಣ ತಮ್ಮ ಅಜ್ಜ ಅಜ್ಜಿ ತಮ್ಮ ತಂಗಿ ಮಗ ಮಗಳು ಸೊಸೆ ಅಳಿಯ ಹೀಗೆ ಎಲ್ಲರನ್ನೂ ಒಳಗೊಂಡಿರುತ್ತದೆ.....

ಈ ಶಿಥಿಲತೆಯನ್ನೇ ನಾವು ಮೌಲ್ಯಗಳ ಕುಸಿತ ಎಂದು ಬೊಬ್ಬೆ ಹೊಡೆಯುತ್ತಿರುವುದು. ಆಧುನಿಕತೆ ಅಥವಾ ನಗರೀಕರಣ ಅಥವಾ ತಾಂತ್ರಿಕ ಬೆಳವಣಿಗೆ ಇದರ ಹಿಂದಿನ ಮರ್ಮ ಎಂದು ಊಹಿಸಲಾಗುತ್ತದೆ.

ಕಣ್ಣಿಗೆ ಕಾಣುವಷ್ಟು, ಮನಸ್ಸಿಗೆ ನಾಟುವಷ್ಟು, ನೇರವಾಗಿಯೇ ಇದು ಗೋಚರಿಸುತ್ತಿದೆ. ಬಹುತೇಕರ ಮಾತಿನಲ್ಲಿ ಇದು ಆಗಾಗ ಸುಳಿಯುತ್ತಿರುತ್ತದೆ.



ಕಾಲ ಬದಲಾಗಿದೆ ಅಥವಾ ಕಾಲ ಕೆಟ್ಟಿದೆ ಎಂದು ಸಾಂಕೇತಿಕವಾಗಿ ಕಾಲದ ಮಹಿಮೆಯನ್ನು ಉದಾಹರಿಸುತ್ತಾರೆ......

ಹಣ ಅಧಿಕಾರ ಅಂತಸ್ತು ಜನಪ್ರಿಯತೆ ದುರಾಸೆ ಇದಕ್ಕೆ ಬಹುಮುಖ್ಯ ಕಾರಣ ಎಂದು ಗುರುತಿಸಲಾಗುತ್ತದೆ. ಜಾಗೃತ ಮನಸ್ಥಿತಿಯವರ ಗೊಂದಲವೆಂದರೆ ಈ ವ್ಯವಸ್ಥೆಯೊಂದಿಗೆ ಹೊಂದಾಣಿಕೆ ಮಾಡಿಕೊಂಡು ಹೋಗಬೇಕೆ ಅಥವಾ ಇದರ ವಿರುದ್ಧ ಹೋಗಬೇಕೆ ? .....

ಹೊಂದಾಣಿಕೆ ಮಾಡಿಕೊಂಡರೆ ಆತ್ಮ ವಂಚನೆ ಮಾಡಿಕೊಂಡಂತಾಗುತ್ತದೆ. ವಿರುದ್ಧ ಹೋದರೆ ಅರೆ ಹುಚ್ಚರಾಗುತ್ತೇವೆ. ಕನಿಷ್ಠ ನಿರ್ಲಕ್ಷತೆ ಅಥವಾ ನಿರ್ಲಿಪ್ತತೆ ತಾಳಲು ಇಂದಿನ ವಾಸ್ತವ ಬದುಕು ಬಿಡುವುದಿಲ್ಲ. ಎರಡರಲ್ಲಿ ಒಂದನ್ನು ಆಯ್ಕೆಮಾಡಿಕೊಳ್ಳಬೇಕಾದ ಅನಿವಾರ್ಯತೆ ಇದೆ. ಏಕೆಂದರೆ ಮೊದಲೇ ಹೇಳಿದಂತೆ ನಿಮ್ಮ ಮನಸ್ಥಿತಿ ಜಾಗೃತವಾಗಿದೆ.

ಆದ್ದರಿಂದ........
ಪ್ರೀತಿಯ ಅಂಗಡಿಗೆ ನಿಮಗೆ ಸ್ವಾಗತ.........
ಪ್ರೀತಿ ಬೇಕೆ ಪ್ರೀತಿ ಗೆಳತಿಯರೇ,
ಪ್ರೀತಿ ಬೇಕೆ ಪ್ರೀತಿ ಗೆಳೆಯರೇ,

ಬನ್ನಿ ನನ್ನೊಂದಿಗೆ ನನ್ನ ಮನದಂಗಳಕ್ಕೆ,
ಯಾವ ಪ್ರೀತಿ ಬೇಕು - ಎಷ್ಟು ಪ್ರೀತಿ ಬೇಕು,
ತೆಗೆದುಕೊಳ್ಳಿ - ಮೊಗೆದುಕೊಳ್ಳಿ ನಿಮ್ಮ ಭಾವನೆಗಳಿಗನುಗುಣವಾಗಿ,....
ಬೊಗಸೆ ಕಂಗಳಲ್ಲಿ -
ವಿಶಾಲ ಹೃದಯದಲ್ಲಿ -
ತುಂಬು ಮನಸ್ಸಿನಲ್ಲಿ,....
ಹುಚ್ಚುಹಿಡಿಸಲಷ್ಟು ಪ್ರೀತಿ -
ಹುಚ್ಚು ಬಿಡಿಸಲಷ್ಟು ಪ್ರೀತಿ,
ಹಣದ ಆಕರ್ಷಣೆಗೊಂದಷ್ಟು ಪ್ರೀತಿ - ದೇಹದ ಆಕರ್ಷಣೆಗೊಂದಷ್ಟು ಪ್ರೀತಿ,
ಸುಂದರ ಯುವಕನಿಗೊಂದಷ್ಟು ಪ್ರೀತಿ,
ಕುರೂಪಿಯೊಬ್ಬಳಿಗೊಂದಷ್ಟು ಪ್ರೀತಿ,
ಶ್ರೀಮಂತರ ಮನೆಯ ರಾಜಕುಮಾರಿಗೊಂದಷ್ಟು ಪ್ರೀತಿ,ರೈಲು ನಿಲ್ದಾಣದ ಕೂಲಿಯವನಿಗೊಂದಷ್ಟು ಪ್ರೀತಿ,ವಿಧುರನಿಗೊಂದಷ್ಟು ಪ್ರೀತಿ - ವಿಚ್ಛೇದಿತೆಗೊಂದಷ್ಟು ಪ್ರೀತಿ,ಮುದುಕನಿಗೊಂದಷ್ಟು ಪ್ರೀತಿ - ಎಳೆ ಹುಡುಗಿಗೊಂದಷ್ಟು ಪ್ರೀತಿ,...
ಹೃದಯಕ್ಕೆ ಚೂರಿ ಹಾಕುವವಳಿಗೊಂದಷ್ಟು ಪ್ರೀತಿ,ಬದುಕಿಗೆ ಕೊಳ್ಳಿ ಇಡುವವನೊಬ್ಬನಿಗೊಂದಷ್ಟು ಪ್ರೀತಿ,ಆಡಂಬರವಾಗಿ ನುಲಿಯುವವಳಿಗೊಂದಷ್ಟು ಪ್ರೀತಿ,ಹೃದಯಕ್ಕೇ ಕಿಚ್ಚುಹಚ್ಚುವ ತ್ಯಾಗಜೀವಿಗೊಂದಷ್ಟು ಪ್ರೀತಿ,ಕ್ಯಾನ್ಸರ್ ರೋಗಿಯೊಬ್ಬಳಿಗೊಂದಷ್ಟು ಪ್ರೀತಿ,
ಜೈಲಿನ ಖೈದಿಯೊಬ್ಬನಿಗೊಂದಷ್ಟು ಪ್ರೀತಿ,
ದೂರದ ಸೈನಿಕನ ಹೃದಯಕ್ಕೊಂದಷ್ಟು ಪ್ರೀತಿ,
ಪಕ್ಕದ ಮನೆಯ ಕಿಟಕಿಯ ಚೆಲುವೆಗೊಂದಷ್ಟು ಪ್ರೀತಿ,.....
ಮೋಸ ಮಾಡಿದವನಿಗೊಂದಷ್ಟು ಪ್ರೀತಿ,
ಮೋಸ ಹೋದವಳಿಗೊಂದಷ್ಟು ಪ್ರೀತಿ,
ಅಂಗವಿಕಲೆಗೊಂದಷ್ಟು ಪ್ರೀತಿ - ಮನೋರೋಗಿಗೊಂದಷ್ಟು ಪ್ರೀತಿ,
ಜಾತಿ ಬಿಟ್ಟವಳಿಗೊಂದಷ್ಟು ಪ್ರೀತಿ, ಧರ್ಮಭ್ರಷ್ಟನಿಗೊಂದಷ್ಟು ಪ್ರೀತಿ,
ಗಂಡ ಬಿಟ್ಟವಳಿಗೊಂದಷ್ಟು ಪ್ರೀತಿ - ಹೆಂಡತಿಕೊಂದವನಿಗೊಂದಷ್ಟು ಪ್ರೀತಿ,......
ದೂರ ಪ್ರಯಾಣಕ್ಕೊಂದಷ್ಟು ಪ್ರೀತಿ - ಫೇಸ್ ಬುಕ್ ಸ್ನೇಹಕ್ಕೊಂದಷ್ಟು ಪ್ರೀತಿ,
ಕಾಮುಕನಿಗೊಂದಷ್ಟು ಪ್ರೀತಿ - ನಪುಂಸಕನಿಗೊಂದಷ್ಟು ಪ್ರೀತಿ,.....
ಬನ್ನಿ ಗೆಳೆಯ - ಗೆಳತಿಯರೇ ನನ್ನ ಮನದಂಗಳಕ್ಕೆ,ನಾನೊಬ್ಬ ಪ್ರೀತಿಯ ವ್ಯಾಪಾರಿ,
ಪ್ರೀತಿಯ ವ್ಯಾಪಾರದಲ್ಲಿ ಭರ್ಜರಿ ಲಾಭ ಗಳಿಸುತ್ತಲೇ ಇದ್ದೇನೆ,ವರ್ಷದಿಂದ ವರ್ಷಕ್ಕೆ ವ್ಯಾಪಾರ ವೃದ್ಧಿಸುತ್ತಲೇ ಇದೆ,.....ಪ್ರೀತಿಯನ್ನು ಕೊಳ್ಳುವವರಿಲ್ಲದೆ ವ್ಯಾಪಾರ ನಾಶವಾಗಿ,
ಪ್ರೇಮಿಗಳ ಹೃದಯದಲ್ಲಿ ನಿಜ ಪ್ರೀತಿ
ಶಾಶ್ವತವಾಗಿ ನೆಲೆಗೊಳ್ಳುವವರೆಗೂ ........
ವ್ಯಾಪಾರ ಮಾಡುತ್ತಲೇ ಇರುತ್ತೇನೆ...,,,,,,,,,,
ಆದರೆ,
ಮನದಾಳದಿಂದ ಹೇಳುತ್ತೇನೆ.......
ಪ್ರೀತಿ ವ್ಯಾಪಾರವಲ್ಲ, ಅದು ಜೀವಸೆಲೆ. ಅದು ಭ್ರಮೆಯನ್ನು ಕಳಚಿ ವಾಸ್ತವವಾಗಿ ಅಮರವಾಗುವವರೆಗೂ ವ್ಯಾಪಾರ ಮಾಡುತ್ತಲೇ ಇರುತ್ತೇನೆ.........

ಪ್ರೀತಿ ಪ್ರೀತಿಯಾಗಿಯೇ ನಿಮಗೆ ದೊರೆತಾಗ ನನ್ನ ವ್ಯಾಪಾರ ತನ್ನ ಅಸ್ತಿತ್ವ ಕಳೆದುಕೊಳ್ಳುತ್ತದೆ. ಅಲ್ಲಿಯವರೆಗೂನಾನೊಬ್ಬಪ್ರೀತಿಯವ್ಯಾಪಾರಿ.....ಬನ್ನಿ ಗೆಳೆಯ ಗೆಳತಿಯರೆ....ನಿಮಗಿಷ್ಟದ ಪ್ರೀತಿ ಕೊಳ್ಳಲು ನನ್ನ ಮನಸ್ಸಿನ ಅಂಗಳಕ್ಕೆ.......ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ,ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

# ವಿವಿಧ ರೈಲ್ವೆ ಕಾಮಗಾರಿಗಳಿಗೆ ಕೇಂದ್ರ ಸಚಿವ ಸೋಮಣ್ಣ ಶಂಕು ಸ್ಥಾಪನೆ

» **ತುಮಕೂರು**

ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಅವರು ಬುಧವಾರ ನಗರದ ಬಟವಾಡಿ, ಬಡ್ಡಿಹಳ್ಳಿ ಹಾಗೂ ಮೈದಾಳ ರೈಲ್ವೆ ಗೇಟ್ ಬಳಿ ರೋಡ್ ಓವರ್ ಬ್ರಿಡ್ಜ್(ಆರ್‌ಓಬಿ) ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದರು.

ಮೈದಾಳದಲ್ಲಿ ಶಂಕುಸ್ಥಾಪನೆ ನೆರವೇರಿಸಿದ ನಂತರ ಮಾತನಾಡಿದ ಅವರು ನಗರದಲ್ಲಿ 127.43 ಕೋಟಿ ರೂ. ವೆಚ್ಚದಲ್ಲಿ ರೈಲ್ವೆ ಮೇಲ್ಸೇತುವೆ ಹಾಗೂ ಕೆಳ ಸೇತುವೆ ನಿರ್ಮಾಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ರೈಲ್ವೆ ಮೇಲ್ಸೇತುವೆ ಹಾಗೂ ಕೆಳ ಸೇತುವೆ ನಿರ್ಮಾಣ ಮಾಡುವುದರಿಂದ ದ್ವಿಚಕ್ರ ವಾಹನ ಹಾಗೂ ಪಾದಚಾರಿಗಳ ಸುಗಮ ಸಂಚಾರಕ್ಕೆ ಸಹಕಾರಿಯಾಗುತ್ತದೆ ಎಂದು ತಿಳಿಸಿದರು. ರೋಡ್ ಓವರ್ ಬ್ರಿಡ್ಜ್ ನಿರ್ಮಾಣಕ್ಕಾಗಿ ಬಟವಾಡಿ ರೈಲ್ವೆ ಗೇಟ್(ಎಲ್.ಸಿ 39) ಬಳಿ 43.37 ಕೋಟಿ ರೂ., ಬಡ್ಡಿಹಳ್ಳಿ ಗೇಟ್(ಎಲ್.ಸಿ 38)ಬಳಿ 26.75 ಕೋಟಿ ರೂ. ಹಾಗೂ ಮೈದಾಳ ಗೇಟ್ ಬಳಿ(ಎಲ್.ಸಿ 35) 57.31 ಕೋಟಿ ರೂ. ಸೇರಿ ಒಟ್ಟು 127.43 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲಾಗುತ್ತಿದ್ದು, ಮುಂದಿನ 18 ತಿಂಗಳೊಳಗಾಗಿ ಕಾಮಗಾರಿ ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲಾಗುವುದು ಎಂದು ತಿಳಿಸಿದರು.ಕರ್ನಾಟಕ ರಾಜ್ಯದಲ್ಲಿ 1900 ಕೋಟಿ ರೂ. ವೆಚ್ಚದಲ್ಲಿ 61 ಅಮೃತ್ ಭಾರತ್ ರೈಲ್ವೆ ಸ್ಟೇಷನ್‌ಗಳ ಅಭಿವೃದ್ಧಿಪಡಿಸಲು ಯೋಜನೆ ರೂಪಿಸಲಾಗಿದೆ. ಇದರೊಂದಿಗೆ 16 ಕೋಟಿ ರೂ. ವೆಚ್ಚದಲ್ಲಿ ಗುಬ್ಬಿ ಹಾಗೂ 24 ಕೋಟಿ ರೂ. ವೆಚ್ಚದಲ್ಲಿ ತಿಪಟೂರು ರೈಲ್ವೆ ನಿಲ್ದಾಣವನ್ನು ಅಭಿವೃದ್ಧಿ ಪಡಿಸಲಾಗುವುದು. ಅಲ್ಲದೆ 89 ಕೋಟಿ ರೂ. ವೆಚ್ಚದಲ್ಲಿ ನಗರದ ರೈಲ್ವೆ ನಿಲ್ದಾಣವನ್ನು ಅಭಿವೃದ್ಧಿಪಡಿಸಲಾಗುವುದು ಎಂದು ತಿಳಿಸಿದರು.ಡಾ: ಶ್ರೀ ಶಿವಕುಮಾರ ಸ್ವಾಮೀಜಿ ಅವರ ಹೆಸರನ್ನು ನಗರದ ರೈಲ್ವೆ ನಿಲ್ದಾಣಕ್ಕೆ ನಾಮಕರಣ ಮಾಡುವ ಪ್ರಸ್ತಾವನೆಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಪ್ರಸ್ತಾವನೆಗೆ ಒಪ್ಪಿಗೆ ಸೂಚಿಸಿದ ರಾಜ್ಯ ಸರ್ಕಾರಕ್ಕೆ ಅಭಿನಂದನೆ ತಿಳಿಸಿದರು.

ಭಾರತದ ರೈಲ್ವೆ ವ್ಯವಸ್ಥೆಯನ್ನು ಮತ್ತಷ್ಟು ಆಧುನೀಕರಿಸುವ ಹಾಗೂ ರೈಲ್ವೆ ಪ್ರಯಾಣಿಕರಿಗೆ ಉತ್ತಮ ಸೇವೆ ಮತ್ತು ಸುರಕ್ಷತೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ಯೋಜನೆಗಳನ್ನು ರೂಪಿಸಲಾಗಿದೆ ಎಂದು ತಿಳಿಸಿದರು.ನಗರ ಶಾಸಕ ಜಿ.ಬಿ. ಜ್ಯೋತಿ ಗಣೇಶ್ ಮಾತನಾಡಿ ವಿ. ಸೋಮಣ್ಣ ತುಮಕೂರಿನ ಲೋಕಸಭಾ ಸದಸ್ಯ ಮತ್ತು ಕೇಂದ್ರದ ಸಚಿವರಾಗಿ ಅಧಿಕಾರ ವಹಿಸಿಕೊಂಡ 6 ತಿಂಗಳೊಳಗಾಗಿ ನೂರಾರು ಕೋಟಿ ರೂ. ಗಳ ಅನುದಾನವನ್ನು ನಗರದ ಅಭಿವೃದ್ಧಿಗೆ ತಂದುಕೊಟ್ಟಿದ್ದಾರೆ ಎಂದು ತಿಳಿಸಿದರು.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T